ಕನ್ನಡಪ್ರಭ
ಸೋಮವಾರ 4.05.2026

ಗರಿಷ್ಠ 36°c | ಕನಿಷ್ಠ 23°c

ಸುದ್ದಿ ಸಿಂಚನ

ಕಸಾಪ ಸಂಸ್ಥಾಪನಾ ದಿನಾಚರಣೆ ನಾಳೆ

ಹಾವೇರಿ: ಇಲ್ಲಿನ ವಿನಾಯಕ ನಗರದ ಶ್ರೀ ಗಂಗಾಧರ ನಂದಿ ಕನ್ನಡ ಸಾಹಿತ್ಯ ಭವನದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ ಹಾಗೂ ಸಾಧಕರಿಗೆ ಸನ್ಮಾನ ಸಮಾರಂಭ ಮೇ 5ರಂದು ಬೆಳಗ್ಗೆ 11 ಗಂಟೆಗೆ ಜರುಗಲಿದೆ. ಹುತಾತ್ಮ ಮೈಲಾರ ಮಹಾದೇವಪ್ಪನವರ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ಅಧ್ಯಕ್ಷ ಸಂಜೀವಕುಮಾರ ನೀರಲಗಿ ಕಾರ್ಯಕ್ರಮ ಉದ್ಘಾಟಿಸುವರು. ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಘಟಕದ ಗೌರವ ಕೋಶಾಧ್ಯಕ್ಷ ಎಸ್.ಎನ್. ದೊಡ್ಡಗೌಡ್ರ ಅಧ್ಯಕ್ಷತೆ ವಹಿಸುವರು. ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಘಟಕದ ಅಧ್ಯಕ್ಷ ಲಿಂಗಯ್ಯ ಬಿ. ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡುವರು. ನಿವೃತ್ತ ಪ್ರಾಚಾರ್ಯ ಡಾ. ಎಚ್.ಐ. ತಿಮ್ಮಾಪುರ ಉಪನ್ಯಾಸ ನೀಡುವರು. ಡಾ.ಸತೀಶ ಕುಲಕರ್ಣಿ, ಅಶೋಕ ಶಾಸ್ತ್ರಿ, ವೈ.ಬಿ. ಆಲದಕಟ್ಟಿ, ಎಚ್.ಎಸ್. ಚೆನ್ನಿಕಟ್ಟಿ, ಪರಿಮಳಾ ಜೈನ್, ಶಂಕರ ಸುತಾರ ಹಾಗೂ ಪೃಥ್ವಿರಾಜ್ ಬೆಟಗೇರಿ ಉಪಸ್ಥಿತರಿರುವರು. ಇದೇ ಸಂದರ್ಭದಲ್ಲಿ ಲಿಂಗರಾಜ ಸೊಟ್ಟಪ್ಪನವರ, ಡಾ.ಕಾಂತೇಶರೆಡ್ಡಿ ಗೋಡಿಹಾಳ, ವೀರೇಶ ಜಂಬಿಗಿ, ನಿವೇದಿತಾ ಅಜ್ಜಮ್ಮನವರ, ಲಕ್ಷ್ಮಿ ವಾಲ್ಮೀಕಿ, ಆರತಿ ಆನ್ವೇರಿ, ಶಂಭುಲಿಂಗ ಸುಂಕದ, ಪ್ರಸನ್ನಕುಮಾರ ಪಾಟೀಲ ಅವರನ್ನು ಸನ್ಮಾನಿಸಿ, ಗೌರವಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

ಆಯಾನ್ ಪುಟಾಣೆ ರಾಜ್ಯ ಚೆಸ್ ಚಾಂಪಿಯನ್



ರಾಣೆಬೆನ್ನೂರು ಖನ್ನೂರ ವಿದ್ಯಾನಿಕೇತನ ಸಿಬಿಎಸ್‌ಇ ಶಾಲೆಯ ಅಯಾನ್ ಪುಟಾಣೆ ಮೈಸೂರಿನಲ್ಲಿ ಜರುಗಿದ ಕರ್ನಾಟಕ ರಾಜ್ಯ ಚೆಸ್ ಚಾಂಪಿಯನ್‌ಶಿಪ್ 2026ರಲ್ಲಿ ರಾಜ್ಯ ಚಾಂಪಿಯನ್ ಆಗಿ ಪ್ರಶಸ್ತಿ ಸ್ವೀಕರಿಸಿದರು.

ರಾಣೆಬೆನ್ನೂರು: ನಗರದ ಖನ್ನೂರ ವಿದ್ಯಾನಿಕೇತನ ಸಿಬಿಎಸ್‌ಇ ಶಾಲೆಯ ಅಯಾನ್ ಪುಟಾಣೆ (10 ವರ್ಷ) ಮೈಸೂರಿನಲ್ಲಿ ಜರುಗಿದ ಕರ್ನಾಟಕ ರಾಜ್ಯ ಚೆಸ್ ಚಾಂಪಿಯನ್‌ಶಿಪ್ 2026ರಲ್ಲಿ ವಿಜಯ ಸಾಧಿಸಿ ಅತಿ ಕಿರಿಯ ವಯಸ್ಸಿನಲ್ಲಿ ರಾಜ್ಯ ಚಾಂಪಿಯನ್ ಆಗಿ ಹೊರಹೊಮ್ಮಿದ್ದಾರೆ. ಟೂರ್ನಿಯಲ್ಲಿ ಅದ್ಭುತ ಪ್ರದರ್ಶನ ನೀಡಿದ ಆಯಾನ್, ಒಟ್ಟು 9 ಪಂದ್ಯಗಳಲ್ಲಿ 8 ಅಂಕಗಳನ್ನು ಗಳಿಸಿ (7 ಜಯಗಳು, 2 ಡ್ರಾ) ಸೋಲಿಲ್ಲದೆ ಚಾಂಪಿಯನ್ ಪಟ್ಟ ಗಳಿಸಿದ್ದಾರೆ. ಕೃಷ್ಣ ದ್ವಿತೀಯ, ಸುದರ್ಶನ ಭಟ್ ತೃತೀಯ, ಹಾಗೂ ಸಿದ್ಧಾಂತ್ ಪೂಂಜಾ ನಾಲ್ಕನೇ ಸ್ಥಾನವನ್ನು ಪಡೆದರು.

ನಿಧನ

ಚಂದ್ರಶೇಖರಯ್ಯ



ರಾಣೆಬೆನ್ನೂರು: ತಾಲೂಕಿನ ಯತ್ತಿನಹಳ್ಳಿ ಗ್ರಾಮದ ನಿವೃತ್ತ ಮುಖ್ಯ ಶಿಕ್ಷಕ ಚಂದ್ರಶೇಖರಯ್ಯ ಕೊಟ್ರಯ್ಯ ಹಂಜಗಿಮಠ (90) ಶನಿವಾರ ನಿಧನರಾದರು. ಅವರಿಗೆ ಪುತ್ರ ಮತ್ತು ಐವರು ಪುತ್ರಿಯರು ಇದ್ದಾರೆ.

ನಿಜಲಿಂಗಪ್ಪ ಕೊಟ್ಟೂರ



ರಾಣೆಬೆನ್ನೂರು: ಇಲ್ಲಿನ ಗಾಂಧಿಗಲ್ಲಿಯ ನಿವಾಸಿ ನಿಜಲಿಂಗಪ್ಪ ಕಲವೀರಪ್ಪ ಕೊಟ್ಟೂರ (64) ನಿಧನರಾದರು. ಅವರಿಗೆ ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು ಬಳಗವಿದೆ.

ಮೃತಪಟ್ಟವನ ಕುಟುಂಬಕ್ಕೆ ₹2 ಲಕ್ಷ ಪರಿಹಾರ



ಹಿರೇಕೆರೂರು ತಾಲೂಕಿನ ಚಿಕ್ಕೆರೂರು ನೀರಿನ ಹೊಂಡದ ಹತ್ತಿರ ಆಟವಾಡುತ್ತಿದ್ದಾಗ ಕಾಲುಜಾರಿ ಬಿದ್ದು ಮೃತಪಟ್ಟಿದ್ದ ತರುಣ ಸಿದ್ದನಗೌಡ ಮರಿಯಪ್ಪನವರ ಅವರ ಕುಟುಂಬದವರಿಗೆ ಸಿಎಂ ಪರಿಹಾರ ನಿಧಿಯಿಂದ ಮಂಜೂರಾದ ₹2 ಲಕ್ಷ ಮೊತ್ತದ ಚೆಕ್‌ನ್ನು ಶಾಸಕ ಯು.ಬಿ. ಬಣಕಾರ ಹಸ್ತಾಂತರಿಸಿದರು.

• **ಕನ್ನಡಪ್ರಭ ವಾರ್ತೆ** ಹಿರೇಕೆರೂರು

ತಾಲೂಕಿನ ಚಿಕ್ಕೆರೂರು ಗ್ರಾಮದ ನೀರಿನ ಹೊಂಡದ ಹತ್ತಿರ ಆಟವಾಡುತ್ತಿದ್ದಾಗ ಆಕಸ್ಮಿಕವಾಗಿ ಕಾಲುಜಾರಿ ಬಿದ್ದು ಮೃತಪಟ್ಟಿದ್ದ ತರುಣ ಸಿದ್ದನಗೌಡ, ಮರಿಯಪ್ಪನವರ ಅವರ ಕುಟುಂಬದವರಿಗೆ ಸಿಎಂ ಪರಿಹಾರ ನಿಧಿಯಿಂದ ಮಂಜೂರಾದ 2 ಲಕ್ಷ ರು. ಮೊತ್ತದ ಚೆಕ್‌ನ್ನು ಶಾಸಕ ಯು.ಬಿ. ಬಣಕಾರ ಹಸ್ತಾಂತರಿಸಿದರು.

ಈ ವೇಳೆ ಮಾತನಾಡಿದ ಶಾಸಕ ಯು.ಬಿ. ಬಣಕಾರ, ತರುಣ ಸಿದ್ದನಗೌಡ ಮರಿಯಪ್ಪನವರ, ನೀರಿನ ಹೊಂಡದ ಹತ್ತಿರ ಆಟವಾಡುತ್ತಿದ್ದಾಗ ಆಕಸ್ಮಿಕವಾಗಿ ಕಾಲುಜಾರಿ ಬಿದ್ದು ಮೃತಪಟ್ಟಿದ್ದು ವಿಷಾದನೀಯ ಸಂಗತಿಯಾಗಿದೆ.

ಈತನನ್ನು ಪೋಷಕರಿಗೆ ಮುಖ್ಯಮಂತ್ರಿ ಪರಿಹಾರ ನಿಧಿಯಿಂದ ಆರ್ಥಿಕ ಧನಸಹಾಯ ಪರಿಹಾರ ನಿಡುವಂತೆ ಸಿಎಂ ಅವರಿಗೆ ಮನವಿ ಮಾಡಲಾಗಿತ್ತು. ಇದರನ್ವಯ ರಾಜ್ಯ ಸರ್ಕಾರ ಮೃತ ಬಾಲಕನ ಪೋಷಕರಿಗೆ 2 ಲಕ್ಷ ಹಣ ಮಂಜೂರು ಮಾಡಿದೆ. ಆತನ ಕಳೆದುಕೊಂಡ ದುಃಖ ಭರಿಸುವ ಶಕ್ತಿ ದೇವರು ಪೋಷಕರಿಗೆ ನೀಡಲಿ ಎಂದು ಪ್ರಾರ್ಥಿಸಿದರು.

ಈಸಂದರ್ಭದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ತಾಲೂಕಾಧ್ಯಕ್ಷ ಮಲ್ಲಿಕಾರ್ಜುನ ಬುರಡೀಕಟ್ಟಿ, ಜಿಪಂ ಮಾಜಿ ಸದಸ್ಯ ಶಿವರಾಜ ಹರಿಜನ, ಬಸವರಾಜ ಮಂಗಣಿ, ರುದ್ರಗೌಡ ಮೃತನ ಸೇರಿದಂತೆ ವಾರಸುದಾರರು ಗ್ರಾಮಸ್ಥರು ಹಾಜರಿದ್ದರು.

ಕನಕದಾಸ ವೃತ್ತ ಅಭಿವೃದ್ಧಿಗೊಳಿಸಿ

ಹಾವೇರಿ: ನಗರದ ಕಾಗಿನೆಲೆ ರಸ್ತೆ ಬಳಿಯ ಕನಕದಾಸ ವೃತ್ತವನ್ನು ಸಮಗ್ರ ಅಭಿವೃದ್ಧಿಗೊಳಿಸಿ ತಿಂಗಳೊಳಗೆ ದಾಸ ಶ್ರೇಷ್ಠ ಕನಕದಾಸ ಮೂರ್ತಿಯನ್ನು ಪ್ರತಿಷ್ಠಾಪಿಸಲಾಗುವುದು ಎಂದು ಹಾವೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಸ್.ಎಫ್.ಎನ್. ಗಾಜೀಗೌಡ ತಿಳಿಸಿದರು. ಇಲ್ಲಿಯ ಪ್ರವಾಸ ಮಂದಿರದಲ್ಲಿ ಕಾಗಿನೆಲೆ ಶ್ರೀ ಕನಕ ಗುರುಪೀಠದ ಜಗದ್ಗುರು ಶ್ರೀ ನಿರಂಜನಾನಂದಪುರಿ ಸ್ವಾಮೀಜಿ ಸಮ್ಮುಖದಲ್ಲಿ ನಡೆದ ಸಮಾಲೋಚನಾ ಸಭೆಯಲ್ಲಿ ಅವರು ಮಾತನಾಡಿದರು. ಈಗಾಗಲೇ ಹೆಸ್ಕಾಂ ಅಧಿಕಾರಿಗಳು, ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು, ನಗರಸಭೆ ಅಧಿಕಾರಿಗಳು ಮತ್ತು ನಗರಾಭಿವೃದ್ಧಿ ಪ್ರಾಧಿಕಾರದ ಎಂಜಿನಿಯರ್‌ಗಳು ಕನಕದಾಸರ ವೃತ್ತ ಮತ್ತು ಮೂರ್ತಿ ಪ್ರತಿಷ್ಠಾಪನೆ ಮಾಡುವ ಸ್ಥಳವನ್ನು ಪರಿಶೀಲನೆ ಮಾಡಿದ್ದಾರೆ. ಮೂರ್ತಿ ಪ್ರತಿಷ್ಠಾನೆಗೆ ಶ್ರೀ ಕನಕದ ಕುರಿ ಮತ್ತು ಉಣ್ಣೆ ನೇಕಾರರ ಸಹಕಾರಿ ಸಂಘದವರು ಅಗತ್ಯ ಜಾಗವನ್ನು ಬಿಟ್ಟು ಕೊಡಲು ಒಪ್ಪಿಗೆ ಸೂಚಿಸಿದ್ದಾರೆ ಎಂದರು.

ಈ ಸಮಾಲೋಚನಾ ಸಭೆಯಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಂಜೀವಕುಮಾರ ನಿರಲಗಿ, ಅಪರ ಜಿಲ್ಲಾಧಿಕಾರಿ ನಾಗರಾಜ, ಪತ್ರಕರ್ತ ನಿಂಗಪ್ಪ ಚಾವಡಿ ಇತರರಿದ್ದರು.

ಎಫ್‌ಐಡಿ ರದ್ದುಗೊಳಿಸಲು ಆಗ್ರಹಿಸಿ ರೈತ ಸಂಘಟನೆಗಳಿಂದ ಪ್ರತಿಭಟನೆ

ಬೆಳೆಗೆ ಅಗತ್ಯವಿರುವಷ್ಟು ರಸಗೊಬ್ಬರ ದೊರೆಯದಿದ್ದಲ್ಲಿ ಬೆಳೆಗಳ ಇಳುವರಿ ಕುಂಠಿತಗೊಳ್ಳುವ ಸಾಧ್ಯತೆ

• **ಕನ್ನಡಪ್ರಭ ವಾರ್ತೆ** ಶಿಗ್ಗಾಂವಿ

ರಸಗೊಬ್ಬರ ಖರೀದಿಗೆ ರೈತರಿಗೆ ಎಫ್‌ಐಡಿ ಕಡ್ಡಾಯ ಮಾಡಿರುವುದನ್ನು ಕೂಡಲೇ ರದ್ದುಗೊಳಿಸುವಂತೆ ಒತ್ತಾಯಿಸಿ ರೈತ ಸಂಘದ ಪದಾಧಿಕಾರಿಗಳು, ಕಬ್ಬು ಬೆಳೆಗಾರರ ಸಂಘದ ಸದಸ್ಯರು, ವಿವಿಧ ಸಂಘಟನೆಗಳ ಮುಖಂಡರು ಪಟ್ಟಣದಲ್ಲಿ ಶನಿವಾರ ರಾಷ್ಟ್ರೀಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದರು.

ಕಬ್ಬು ಬೆಳೆಗಾರರ ಸಂಘದ ಜಿಲ್ಲಾಧ್ಯಕ್ಷ ಭುವನೇಶ್ವರ ಶಿಡ್ಲಾಪುರ ಮಾತನಾಡಿ, ರಸಗೊಬ್ಬರ ಕಡ್ಡಾಯಗೊಳಿಸಿರುವುದರಿಂದ ಖರೀದಿಗೆ ರೈತರಿಗೆ ಮುಂದಿನ ದಿನಗಳಲ್ಲಿ ತುಂಬಾ ತೊಂದರೆಯಾಗಲಿದೆ. ರೈತರು ಎಕರೆಗೆ ಮೂರ್ನಾಲ್ಕು ಚೀಲ ರಸಗೊಬ್ಬರ ಬಳಸುವುದು ಸಾಮಾನ್ಯವಾಗಿದೆ. ಆದರೆ, ಸರ್ಕಾರ ಎಫ್‌ಐಡಿ ಕಡ್ಡಾಯ ಜಾರಿಗೊಳಿಸುವ ಮೂಲಕ ಪ್ರತಿ ರೈತರಿಗೆ ಒಂದು ಚೀಲ ಗೊಬ್ಬರ ವಿತರಣೆ ಮಾಡುವ ಹುನ್ನಾರ ನಡೆಸಿದೆ. ತಕ್ಷಣವೇ ಎಫ್‌ಐಡಿ ಕಡ್ಡಾಯಗೊಳಿಸಿರುವುದನ್ನು ರದ್ದು ಮಾಡಬೇಕು ಎಂದರು.

ರೈತ ಸಂಘದ ಉಪಾಧ್ಯಕ್ಷ ಶಂಕರಗೌಡ ಪಾಟೀಲ ಮಾತನಾಡಿ, ಚೀಲಗೊಬ್ಬರ ವಿತರಣೆ ಮಾಡುವ ಹುನ್ನಾರ ನಡೆಸಿದೆ. ತಕ್ಷಣವೇ ಎಫ್‌ಐಡಿ ಕಡ್ಡಾಯಗೊಳಿಸಿರುವುದನ್ನು ರದ್ದು ಮಾಡಬೇಕು ಎಂದರು.

ರೈತ ಸಂಘದ ಉಪಾಧ್ಯಕ್ಷ ಶಂಕರಗೌಡ ಪಾಟೀಲ ಮಾತನಾಡಿ, ಬೆಳೆಗೆ ಅಗತ್ಯವಿರುವಷ್ಟು ರಸಗೊಬ್ಬರ ದೊರೆಯದಿದ್ದಲ್ಲಿ ಬೆಳೆಗಳ ಇಳುವರಿ ಕುಂಠಿತಗೊಳ್ಳುವ ಸಾಧ್ಯತೆ ಇದೆ. ಎಫ್‌ಐಡಿ ಕಡ್ಡಾಯ ನಿಯಮ ಸರ್ಕಾರ ಕೂಡಲೇ ಕೈಬಿಡಬೇಕು. ತಾಲೂಕಿನ ಗೊಬ್ಬರ ವ್ಯಾಪಾರಸ್ಥರು ರೈತರಿಗೆ ಲಿಂಕ್ ಮೂಲಕ ಗೊಬ್ಬರ ಕೊಡುವುದನ್ನು ತಕ್ಷಣವೇ ನಿಲ್ಲಿಸಬೇಕು. ರೈತನಿಗೆ ಅವಶ್ಯವಿರುವ ಗೊಬ್ಬರವನ್ನು ಸರ್ಕಾರಗಳು ಸಮರ್ಪಕವಾಗಿ ಪೂರೈಸಬೇಕು ಎಂದು ಒತ್ತಾಯಿಸಿದರು.



ಶಿಗ್ಗಾಂವಿ ಪಟ್ಟಣದಲ್ಲಿ ರಾಷ್ಟ್ರೀಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿ, ಕೃಷಿ ಇಲಾಖೆ ಉಪ ಸಹಾಯಕ ನಿರ್ದೇಶಕ ಶಿವಕುಮಾರ ಮಲ್ಲಾಡದ ಅವರಿಗೆ ವಿವಿಧ ರೈತ ಸಂಘಟನೆಗಳ ಮುಖಂಡರು ಮನವಿ ಸಲ್ಲಿಸಿದರು. ಭುವನೇಶ್ವರ ಶಿಡ್ಲಾಪುರ, ಸಂತೋಷಗೌಡ ಪಾಟೀಲ, ಬಸಲಿಂಗಪ್ಪ ನರಗುಂದ ಇತರರಿದ್ದರು.

> **ರಸಗೊಬ್ಬರ ಕಡ್ಡಾಯಗೊಳಿಸಿರುವುದರಿಂದ ಖರೀದಿಗೆ ರೈತರಿಗೆ ಮುಂದಿನ ದಿನಗಳಲ್ಲಿ ತುಂಬಾ ತೊಂದರೆಯಾಗಲಿದೆ. ರೈತರು ಎಕರೆಗೆ ಮೂರ್ನಾಲ್ಕು ಚೀಲ ರಸಗೊಬ್ಬರ ಬಳಸುವುದು ಸಾಮಾನ್ಯವಾಗಿದೆ. ಆದರೆ, ಸರ್ಕಾರ ಎಫ್‌ಐಡಿ ಕಡ್ಡಾಯ ಜಾರಿಗೊಳಿಸುವ ಮೂಲಕ ಪ್ರತಿ ರೈತರಿಗೆ ಒಂದು ಚೀಲ ಗೊಬ್ಬರ ವಿತರಣೆ ಮಾಡುವ ಹುನ್ನಾರ ನಡೆಸಿದೆ.**
> • **ಭುವನೇಶ್ವರ ಶಿಡ್ಲಾಪುರ** ಕಬ್ಬು ಬೆಳೆಗಾರರ ಸಂಘದ ಜಿಲ್ಲಾಧ್ಯಕ್ಷ

ಪಟ್ಟಣದ ಪೋಸ್ಟ್ ಆಫೀಸ್‌ನಿಂದ ರೈತ ಮುಖಂಡರು ಮೆರವಣಿಗೆ ಮೂಲಕ ರಾಷ್ಟ್ರೀಯ ಹೆದ್ದಾರಿ ತಡೆದು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿರುದ್ಧ ಘೋಷಣೆ ಕೂಗಿ, ಕೃಷಿ ಇಲಾಖೆ ಉಪ ಸಹಾಯಕ ನಿರ್ದೇಶಕ ಶಿವಕುಮಾರ ಮಲ್ಲಾಡದ ಅವರಿಗೆ ಮನವಿ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಕರವೇ ಅಧ್ಯಕ್ಷ ಸಂತೋಷಗೌಡ ಪಾಟೀಲ, ಬಸಲಿಂಗಪ್ಪ ನರಗುಂದ, ಮಂಜುನಾಥ ಕಂಕನವಾಡ , ಗಿರಿಧರಗೌಡ ಪಾಟೀಲ, ಲಕ್ಷ್ಮಣ ಹಂಚಿನಮನಿ, ಹನುಮಂತಗೌಡ ಏಗನಗೌಡ, ಶಂಭು ನಂದಿ, ಬಸನಗೌಡ್ರ ಏಗನಗೌಡ್ರ, ಬಸವರಾಜ ಗಂಜಿಗಟ್ಟಿ, ವಿವಿಧ ಸಂಘಟನೆಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಕಾರ್ಮಿಕರಿಲ್ಲದೇ ನಿರಾತಂಕ ಬದುಕು ಸಾಗುವುದು ಕಷ್ಟ: ನ್ಯಾ. ರಾಜೇಶ್ವರಿ

• **ಕನ್ನಡಪ್ರಭ ವಾರ್ತೆ** ಬ್ಯಾಡಗಿ

ಜಿಲ್ಲಾ ಮತ್ತು ತಾಲೂಕು ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಹಾವೇರಿ, ತಾಲೂಕು ನ್ಯಾಯವಾದಿಗಳ ಸಂಘ ಬ್ಯಾಡಗಿ, ಜಿಲ್ಲಾ ಮತ್ತು ತಾಲೂಕು ಕಾರ್ಮಿಕ ಇಲಾಖೆ ಬ್ಯಾಡಗಿ ಇವರ ಇವರ ಸಂಯುಕ್ತಾಶ್ರಯದಲ್ಲಿ ಅಂತಾರಾಷ್ಟ್ರೀಯ ಕಾರ್ಮಿಕ ದಿನಾಚರಣೆ ಕಾರ್ಯಕ್ರಮ ಪಟ್ಟಣದ ಶಾಹಿ ಗಾರ್ಮೆಂಟ್ಸ್ ಆವರಣದಲ್ಲಿ ಜರುಗಿತು.

ಕಾರ್ಯಕ್ರಮ ಉದ್ಘಾಟಿಸಿದ ತಾಲೂಕು ಕಾನೂನು ಸೇವೆಗಳ ಸಮಿತಿ ಅಧ್ಯಕ್ಷರು ಹಾಗೂ ಹಿರಿಯ ದಿವಾಣಿ ನ್ಯಾಯಾಧೀಶರಾದ ರಾಜೇಶ್ವರಿ ಪುರಾಣಿಕ ಮಾತನಾಡಿ, ಕಾರ್ಮಿಕ ವರ್ಗವಿಲ್ಲವಿಲ್ಲದಿದ್ದರೇ ಜನರ ಬದುಕು ನಿರಾತಂಕವಾಗಿ ಸಾಗುವುದು ಕಷ್ಟವಾಗಿದೆ. ಅದಾಗ್ಯೂ ಸಹ ಕಾರ್ಮಿಕರು ಅತ್ಯಂತ ಸಂಕಷ್ಟಗಳನ್ನು ಎದುರಿಸುತ್ತಿದ್ದಾರೆ. ಹೀಗಾಗಿ ಗೊತ್ತು ಗುರಿಯಿಲ್ಲದ ಬದುಕಿಗೆ ನಿಯಮಿತ ವೇತನ, ಕೆಲಸಕ್ಕೆ ವೇಳೆ, ಅನಾರೋಗ್ಯಕ್ಕೆ ಪರಿಹಾರ ಮಕ್ಕಳ ಶಿಕ್ಷಣಕ್ಕೆ ಸಹಾಯಧನ ಇನ್ನಿತರ ಕಟ್ಟುಪಾಡುಗಳನ್ನು ನಿಯಮಿಸಲಾಗಿದೆ ಎಂದರು.

ದುರಂತಕ್ಕೆ ಪರಿಹಾರ ಕೊಡಲೇಬೇಕು: ಕೆಲಸದಲ್ಲಿ ನಿರತ ಕಾರ್ಮಿಕರು ಅವಘಡಗಳಲ್ಲಿ ಮರಣ ಹೊಂದಿದರೇ ಅಥವಾ ಅಘಘಾತಕ್ಕೆ ಒಳಗಾದಲ್ಲಿ ಮಾಲೀಕರೇ ಪರಿಹಾರ ನೀಡಬೇಕಾಗುತ್ತದೆ, ಹೀಗಾಗಿ ವೈದ್ಯಕೀಯ ವೆಚ್ಚ ಸೇರಿದಂತೆ ಕಾರ್ಮಿಕ ಮೃತರಾದಲ್ಲಿ ಕುಟುಂಬಕ್ಕೆ ಪರಿಹಾರದ ಹಿನ್ನೆಲೆಯಲ್ಲಿ ಮಾಲೀಕರು ಕಾರ್ಮಿಕರ ಮೇಲೆ ವರ್ಕಮನ್ ಕಾಂಪನಸೇಷನ್ ಇನ್ಸೂರೆನ್ಸ್ ಮಾಡಿಸಿಟ್ಟುಕೊಂಡಲ್ಲಿ ಆರ್ಥಿಕ ಪರಿಹಾರ ದೊರಕಲಿದೆ ಎಂದರು.

ಮಕ್ಕಳ ಶಿಕ್ಷಣಕ್ಕೆ ಒತ್ತು: ಕಾರ್ಮಿಕರು ಹೆಚ್ಚು ಪ್ರಮಾಣದಲ್ಲಿದುಶ್ಚಟಗಳಿಂದದೂರವಿರುವ ಮೂಲಕ ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುವ ನಿಟ್ಟಿನಲ್ಲಿ ಇನ್ನಿಲ್ಲದ ಪ್ರಯತ್ನಗಳನ್ನು ಮಾಡಬೇಕು, ಕಾರಣವಿಷ್ಟೇ ನಿಯಮಿತ ವೇತನದಲ್ಲಿ ಕುಟುಂಬಗಳ ನಿರ್ವಹಣೆ ಅಸಾಧ್ಯ. ಹೀಗಾಗಿ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಿದಲ್ಲಿ ಅವರ ತಮ್ಮ ಬದುಕಿಗೆ ಆಸರೆಯಾಗಲಿದ್ದಾರೆ. ಇದಕ್ಕಾಗಿ ಸರ್ಕಾರದಿಂದ ಬರುವಂತಹ ಎಲ್ಲಾ ಪರಿಹಾರಗಳನ್ನು ಪಡೆದುಕೊಳ್ಳುವಂತೆ ತಿಳಿಸಿದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ತರನ್ನುಮ ಬೆಂಗಾಲಿ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಾರ್ಯದರ್ಶಿ ಎಚ್.ವಿ.ಶೈಲಜಾ, ಅಪರ ಸರ್ಕಾರಿ ಅಭಿಯೋಜಕ ಪ್ರಭು ಶೀಗಿಹಳ್ಳಿ, ಸಹಾಯಕ ಸರ್ಕಾರಿ ಅಭಿಯೋಜಕ ಕೆ. ಆರ್. ಲಮಾಣಿ, ರಾಜಣ್ಣ ನ್ಯಾಮತಿ, ವಕೀಲರ ಸಂಘದ ಜಿಲ್ಲಾಧ್ಯಕ್ಷ ಎಚ್.ಸಿ. ಸಿದ್ದನಗೌಡ, ತಾಲೂಕು ನ್ಯಾಯವಾದಿಗಳ ಸಂಘದ ಉಪಾಧ್ಯಕ್ಷ ಜಿ.ಬಿ.ಯಲಗಚ್ಚ, ಕಾರ್ಯದರ್ಶಿ ಎಚ್ .ಜಿ. ಮುಳುಗುಂದ, ಸಹ ಕಾರ್ಯದರ್ಶಿ ಮಂಜುನಾಥ ಕುಮ್ಮೂರ, ಸದಸ್ಯರಾದ ಎಸ್.ಎಸ್. ಕೊಣ್ಣೂರ, ಎನ್.ಎಂ. ಹುಬ್ಬಳ್ಳಿ. ಎಸ್.ಕೆ. ನಾಯಕ್, ಶಾಯಿ ಗಾರ್ಮೆಂಟ್ಸ್ ಉದಯ ಕುಂಬಾರ, ಟಿ. ರವಿಕುಮಾರ, ಕಾರ್ಮಿಕ ಇಲಾಖೆ ಮತ್ತು ನ್ಯಾಯಾಂಗ ಇಲಾಖೆ ಸಿಬ್ಬಂದಿಗಳು ಉಪಸ್ಥಿತರಿದ್ದರು.



ಬ್ಯಾಡಗಿ ಪಟ್ಟಣದ ಶಾಹಿ ಗಾರ್ಮೆಂಟ್ಸ್ ಆವರಣದಲ್ಲಿ ನಡೆದ ಅಂತಾರಾಷ್ಟ್ರೀಯ ಕಾರ್ಮಿಕ ದಿನಾಚರಣೆ ಕಾರ್ಯಕ್ರಮವನ್ನು ನ್ಯಾಯಾಧೀಶೆ ರಾಜೇಶ್ವರಿ ಪುರಾಣಿಕ ಉದ್ಘಾಟಿಸಿದರು.

5 ಕೇಂದ್ರಗಳಲ್ಲಿ ಸುಸೂತ್ರವಾಗಿ ನಡೆದ ನೀಟ್ ಪರೀಕ್ಷೆ

• **ಕನ್ನಡಪ್ರಭ ವಾರ್ತೆ** ಹಾವೇರಿ

ನಗರದ ಐದು ಕೇಂದ್ರಗಳಲ್ಲಿ ಭಾನುವಾರ ನೀಟ್ ಪರೀಕ್ಷೆ ಸುಸೂತ್ರವಾಗಿ ನಡೆಯಿತು. ಕೇಂದ್ರಗಳಿಗೆ ಭಾನುವಾರ ಅಪರ ಜಿಲ್ಲಾಧಿಕಾರಿ ಡಾ. ನಾಗರಾಜ್ ಎಲ್. ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಪರೀಕ್ಷೆ ಕಾರ್ಯಕ್ಕೆ ನಿಯೋಜಿತ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಪರೀಕ್ಷೆ ಮಾರ್ಗಸೂಚಿಸಿ ಕಡ್ಡಾಯವಾಗಿ ಪಾಲಿಸಬೇಕು. ಯಾವುದೇ ಲೋಪವಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು.

ಹಾವೇರಿ ನಗರದ ಜಿ.ಎಚ್. ಪದವಿ ಪೂರ್ವ ಕಾಲೇಜ್, ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜ್, ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜ್, ಗಾಂಧಿಪುರ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ದೇವಗಿರಿ ಸರ್ಕಾರಿ ಎಂಜಿನಿಯರಿಂಗ್ ಕಾಲೇಜಿಗೆ ಭೇಟಿ ನೀಡಿ ಪರಿಶೀಲಿಸಿದರು.

ಜಿಲ್ಲೆಯಲ್ಲಿ ಪರೀಕ್ಷೆಗೆ ನೋಂದಾಯಿಸಿಕೊಂಡ 2316 ವಿದ್ಯಾರ್ಥಿಗಳ ಪೈಕಿ 2251 ವಿದ್ಯಾರ್ಥಿಗಳ ಪರೀಕ್ಷೆಗೆ ಹಾಜರಾಗಿದ್ದು, 65 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದಾರೆ.



ಹಾವೇರಿ ನಗರದ ನೀಟ್ ಪರೀಕ್ಷೆ ಕೇಂದ್ರಗಳಿಗೆ ಭಾನುವಾರ ಅಪರ ಜಿಲ್ಲಾಧಿಕಾರಿ ಡಾ. ನಾಗರಾಜ್ ಎಲ್., ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ರಾಣೆಬೆನ್ನೂರಲ್ಲಿ ನಾಳೆ ಕಸಾಪ ಕಾರ್ಯಕ್ರಮ

ರಾಣೆಬೆನ್ನೂರು: ಜಿಲ್ಲಾ ಮತ್ತು ತಾಲೂಕು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ನಗರದ ಮೆಡ್ಲೇರಿ ರಸ್ತೆ ತಾಲೂಕು ಕಸಾಪ ಭವನದಲ್ಲಿ ಮೇ 5ರಂದು ಸಂಜೆ 5.30ಕ್ಕೆ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ ಏರ್ಪಡಿಸಲಾಗಿದೆ. ನಗರದ ಸಂಜೀವಿನಿ ಪದವಿ ಪೂರ್ವ ಕಾಲೇಜಿನ ಪ್ರಾ. ಪ್ರಭುಲಿಂಗ ಕೋಡದ ಉದ್ಘಾಟಿಸುವರು. ತಾಲೂಕು ಕಸಾಪ ಅಧ್ಯಕ್ಷ ಪ್ರಭಾಕರ ಶಿಗ್ಲಿ ಅಧ್ಯಕ್ಷತೆ ವಹಿಸುವರು. ಜಿಲ್ಲಾ ಕಸಾಪ ಅಧ್ಯಕ್ಷ ಲಿಂಗಯ್ಯ ಹಿರೇಮಠ ಉಪಸ್ಥಿತರಿರುವರು. ನಿವೃತ್ತ ಮುಖ್ಯೋಪಾಧ್ಯಾಯ ಎಚ್.ಎಚ್. ದೊಡ್ಡಮನಿ, ನಿವೃತ್ತ ಶಿಕ್ಷಕ ಆರ್.ಬಿ. ಪಾಟೀಲ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಪರಿಷತ್ತಿನ ಪರಿಚಯ ವಿಷಯ ಕುರಿತು ಮೈದೂರಿನ ಸಹಿಪ್ರಾ ಶಾಲೆಯ ಸಹ ಶಿಕ್ಷಕ ಎಸ್.ಎಂ. ತುಕ್ಕಪ್ಪನವರ ಉಪನ್ಯಾಸ ನೀಡುವರು. ನಂತರ ಶ್ರೀ ಶಾರದಾ ಭರತ ನಾಟ್ಯ ಕಲಾ ಶಾಲೆ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಜರುಗಲಿವೆ ಎಂದು ಪ್ರಕಟಣೆ ತಿಳಿಸಿದೆ.

ಹಕ್ಕುಪತ್ರ ವಿತರಣೆ... ದಾಖಲೆ ರಹಿತವಾಗಿ ವಾಸಿಸುತ್ತಿದ್ದ ಮನೆ ಮಾಲೀಕರಿಗೆ ಹಕ್ಕುಪತ್ರ ವಿತರಣೆ ಸಮಾರಂಭದಲ್ಲಿ ಶಾಸಕ ಮಾನೆ

ಹಾನಗಲ್ಲ ಕ್ಷೇತ್ರಕ್ಕೆ ಅನಿರೀಕ್ಷಿತ ಬಂದ ಅಭ್ಯರ್ಥಿ ನಾನು

• **ಕನ್ನಡಪ್ರಭ ವಾರ್ತೆ** ಹಾನಗಲ್ಲ

ಅನಿರೀಕ್ಷಿತವಾಗಿ ಹಾನಗಲ್ಲ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ಅಭ್ಯರ್ಥಿಯಾದ ನನಗೆ ಈ ತಾಲೂಕಿನ ಜನ ನೀಡಿದ ವಿಶ್ವಾಸಕ್ಕೆ ಬದ್ಧನಾಗಿ ಜನರ ಸೇವೆ ಮಾಡುತ್ತಿದ್ದೇನೆ, ಇದೇ ವಿಶ್ವಾಸವನ್ನು ಉಳಿಸಿಕೊಳ್ಳುತ್ತೇನೆ ಎಂದು ಶಾಸಕ ಶ್ರೀನಿವಾಸ ಮಾನೆ ತಿಳಿಸಿದರು.

ಹಾನಗಲ್ಲ ತಾಲೂಕಿನ ಹೀರೂರಿನಲ್ಲಿ ತಾಲೂಕು ಆಡಳಿತ ಆಯೋಜಿಸಿದ ದಾಖಲೆ ರಹಿತವಾಗಿ ವಾಸಿಸುತ್ತಿದ್ದ ಮನೆ ಮಾಲೀಕರಿಗೆ ಹಕ್ಕುಪತ್ರ ವಿತರಿಸಿ ಮಾತನಾಡಿದ ಅವರು, 2021ರಲ್ಲಿ ಹಾನಗಲ್ಲ ಕ್ಷೇತ್ರಕ್ಕೆ ಅನಿರೀಕ್ಷಿತವಾಗಿ ನಡೆದ ಉಪ ಚುನಾವಣೆಯಲ್ಲಿ ಜನತೆ ವಿಶ್ವಾಸವಿಟ್ಟು ನನ್ನ ಕೈ ಹಿಡಿದರು. ಆ ಸಂದರ್ಭದಲ್ಲಿ ಕೇವಲ 18 ತಿಂಗಳು ಮಾತ್ರ ಕಾಲಾವಧಿ ಇತ್ತು. 2023ರಲ್ಲಿ ತಾಲೂಕಿನಲ್ಲಿ ಜನರ ಸಂಕಷ್ಟ, ಸಾರ್ವಜನಿಕ ಸಮಸ್ಯೆಗಳನ್ನು ಕಣ್ಣಾರೆ ತಿಳಿಯುವ ಉದ್ದೇಶದಿಂದ ದೃಢಸಂಕಲ್ಪ ಯಾತ್ರೆ ಕೈಗೊಂಡ ಸಂದರ್ಭದಲ್ಲಿ 13 ಸಾವಿರಕ್ಕೂ ಹೆಚ್ಚು ಕುಟುಂಬಗಳು ಸರ್ಕಾರಿ ಮತ್ತು ಖಾಸಗಿ ಜಮೀನುಗಳಲ್ಲಿ ಮನೆ ಕಟ್ಟಿಕೊಂಡು ಯಾವುದೇ ದಾಖಲೆ ಇಲ್ಲದೇ ಭಯ ಮತ್ತು ಆತಂಕದಲ್ಲಿ ಜೀವನ ನಡೆಸುತ್ತಿರುವುದು ತಿಳಿಯಿತು. ಆ ಸಂದರ್ಭದಲ್ಲಿ ಇವೆಲ್ಲ ಕುಟುಂಬಗಳಿಗೆ ಶಾಶ್ವತ ಮನೆ ಮಾಲಿಕತ್ವ ದೊರಕಿಸುವ ದೃಢಸಂಕಲ್ಪ ಮಾಡಲಾಯಿತು. ಆ ಸಂಕಲ್ಪವೀಗ ಈಡೇರುತ್ತಿದ್ದು, ಮನೆ ಮಾಲಿಕತ್ವಕ್ಕೆ ಕಳೆದ 2 ತಲೆಮಾರಿನಿಂದ ಚಾತಕ ಪಕ್ಷಿಯಂತೆ ಕಾಯುತ್ತಿದ್ದ ಕುಟುಂಬಗಳಲ್ಲಿ ಕಂಡು ಬರುತ್ತಿರುವ ಸಂತಸ ನನ್ನ ರಾಜಕೀಯ ಜೀವನದ ಸಾರ್ಥಕ ಕ್ಷಣಕ್ಕೆ ಸಾಕ್ಷಿಯಾಗಿದೆ ಎಂದರು. ತಹಸೀಲ್ದಾರ್‌ ರೇಣುಕಾ ಎಸ್. ಮಾತನಾಡಿ, ತಾವು ವಾಸಿಸುತ್ತಿರುವ ಮನೆಗಳನ್ನು ತೆರವುಗೊಳಿಸಿ ತಮ್ಮನ್ನು ಬೀದಿಯಲ್ಲಿ ತಂದು ನಿಲ್ಲಿಸುತ್ತಾರೆ ಎನ್ನುವ ಆತಂಕದಲ್ಲಿಯೇ ಕುಟುಂಬಗಳು ಕಾಲ ಕಳೆಯುವಂತಾಗಿತ್ತು. ಆದರೀಗ ಆತಂಕ ದೂರವಾಗಿದ್ದು, ಹಕ್ಕುಪತ್ರ, ನೋಂದಣಿ ಪತ್ರ, ಇಸ್ವತ್ತು ಹೀಗೆ ಶಾಶ್ವತ ದಾಖಲೆಗಳನ್ನು ಒದಗಿಸಲಾಗಿದೆ. ಆದಷ್ಟು ಬೇಗ ಸರ್ಕಾರದಿಂದ ಅನುಮೋದನೆಗೊಂಡ ಎಲ್ಲ ಫಲಾನುಭವಿಗಳಿಗೂ ಮಾಲಿಕತ್ವ ನೀಡಲಾಗುವುದು. ಎಂದು ತಿಳಿಸಿದರು.

ಹಿರೂರು ಗ್ರಾಮದ 128, ಹನುಮನಕೊಪ್ಪ 162, ಬಾಳಿಹಳ್ಳಿ 150, ಸಾವಿಕೇರಿ 27, ಹರಳಕೊಪ್ಪ 63, ಶೃಂಗೇರಿ 16, ಲಕ್ಷ್ಮೀಪುರ 135, ಡೊಳ್ಳೇಶ್ವರ 114, ಜಂಗಿನಕೊಪ್ಪ 17 ಹಾಗೂ ಅಜಗುಂಡಿಕೊಪ್ಪ ಗ್ರಾಮಗಳ 10 ಸೇರಿದಂತೆ ಒಟ್ಟು 822 ಫಲಾನುಭವಿಗಳಿಗೆ ಹಕ್ಕುಪತ್ರ ವಿತರಿಸಲಾಯಿತು. ಕೆಪಿಸಿಸಿ ಸದಸ್ಯರಾದ ಟಾಕನಗೌಡ ಪಾಟೀಲ, ಖ್ವಾಜಾಮೊಹಿದ್ದೀನ್ ಜಮಾದಾರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಹನುಮಂತಪ್ಪ ಮರಗಡಿ, ಮಂಜು ಇದ್ದರು.




ಹಿರೂರು ಗ್ರಾಮದಲ್ಲಿ ಶಾಸಕ ಶ್ರೀನಿವಾಸ ಮಾನೆ ಕಂದಾಯ ಗ್ರಾಮ, ಉಪ ಗ್ರಾಮ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಿಸಿದರು.

ದೇವಗಿರಿ ಪಿಡಿಒಗೆ ಅತ್ಯುತ್ತಮ ಸೇವಾ ಪ್ರಶಸ್ತಿ ಪ್ರದಾನ

• **ಕನ್ನಡಪ್ರಭ ವಾರ್ತೆ** ಹಾವೇರಿ

ಇತ್ತೀಚೆಗೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ರಾಷ್ಟ್ರೀಯ ಪಂಚಾಯತ ರಾಜ್ಯ ದಿನಾಚರಣೆ ಕಾರ್ಯಕ್ರಮದಲ್ಲಿ ದೇವಗಿರಿ ಗ್ರಾಪಂ ಪಿಡಿಒ ಸುನಿತಾ ಗರಡಿ ಅವರಿಗೆ ಅತ್ಯುತ್ತಮ ಸೇವಾ ಪುರಸ್ಕಾರ ಪ್ರದಾನ ಮಾಡಲಾಯಿತು.

ಗ್ರಾಮ ಪಂಚಾಯತಿಯ ಯೋಜನೆಗಳನ್ನು ಉತ್ತಮ ಆಡಳಿತದ ಮೂಲಕ ಗ್ರಾಮೀಣ ಜನರಿಗೆ ತಲುಪಿಸುವಲ್ಲಿ ಯಶಸ್ವಿಯಾದ ಸಾಧಕ ಪಿಡಿಒಗಳಿಗೆ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ರುಚಿ ಬಿಂದಲ್ ಅವರು ಅತ್ಯುತ್ತಮ ಸೇವಾ ಪುರಸ್ಕಾರ ಪ್ರದಾನ ಮಾಡಿ ಸನ್ಮಾನಿಸಿದರು. ದೇವಗಿರಿ ಗ್ರಾಮ ಪಂಚಾಯಿತಿಯಲ್ಲಿ ಸಮರ್ಪಕ ಕುಡಿಯುವ ನೀರು, ಅಂಗನವಾಡಿ ಅಭಿವೃದ್ಧಿ, ಗ್ರಾಮ ಪಂಚಾಯತಿ ಕಚೇರಿ ಆಧುನೀಕರಣ, ಘನ ತಾಜ್ಯ ವಿಲೇವಾರಿ ನಿರ್ವಹಣೆ, ರಸ್ತೆ, ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಗ್ರಾಮೀಣ ಜನರಿಗೆ ಅಚ್ಚುಕಟ್ಟಾಗಿ ಕಲಿಸಿಕೊಟ್ಟು ಮಾದರಿ ಪಂಚಾಯಿತಿಯಾಗಿ ನಿರ್ಮಾಣ ಮಾಡಿದ ಪಿಡಿಒ ಸುನಿತಾ ಗರಡಿ ಅವರಿಗೆ ಜಿಪಂ ಸಿಇಒ ರುಚಿ ಬಿಂದಲ್ ಹಾಗೂ ಉಪ ಕಾರ್ಯದರ್ಶಿ ಡಾ.ಪುನೀತ್, ಯೋಜನಾ ನಿರ್ದೇಶಕಿ ರೇಖಾ ಡೊಳ್ಳಿನ ಅವರು ಅತ್ಯುತ್ತಮ ಸೇವಾ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಿದರು.



ಹಾವೇರಿ ಜಿಪಂ ಸಭಾಂಗಣದಲ್ಲಿ ದೇವಗಿರಿ ಪಿಡಿಒ ಸುನೀತಾ ಗರಡಿ ಅವರಿಗೆ ಅತ್ಯುತ್ತಮ ಸೇವಾ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಸುದ್ದಿ ಸಿಂಚನ

ರಕ್ತ ಸಂಗ್ರಹ ವಿಷಯದಲ್ಲಿ ನಿರ್ಣಾಯಕ ಹಂತವನ್ನು ತಲುಪಿದ್ದೇವೆ


ಬ್ಯಾಡಗಿ: ಜಿಲ್ಲಾ ರಕ್ತಭಂಡಾರ ಹಾವೇರಿ, ಸರ್ಕಾರಿ ಪದವಿ ಮಹಾವಿದ್ಯಾಲಯ ಬ್ಯಾಡಗಿ, ರೆಡಕ್ರಾಸ್, ಐಕ್ಯೂಎಸಿ ಹಾಗೂ ರಾಷ್ಟ್ರೀಯ ಸ್ವಯಂ ಸೇವಾ ವಿಭಾಗ ಇವರ ಸಂಯಕ್ತಾಶ್ರಯದಲ್ಲಿ ಸ್ವಯಂ ಪ್ರೇರಿತ ಬೃಹತ್ ರಕ್ತದಾನ ಶಿಬಿರ ಜರುಗಿತು. ಶಿಬಿರ ಉದ್ಘಾಟಿಸಿ ಮಾತನಾಡಿದ ಪ್ರಾಚಾರ್ಯ ಡಾ. ಮಲ್ಲಿಕಾರ್ಜುನ ಕಡ್ಡೀಪುಡಿ, ರಕ್ತದಾನ ಮೌಲ್ಯಯುತ ಕಾರ್ಯಕ್ರಮ ಹಾಗೂ ಒಂದು ಸಾಮಾಜಿಕ ಜವಾಬ್ದಾರಿಯಾಗಿದೆ. ತುರ್ತು ಪರಿಸ್ಥಿತಿಗಳಲ್ಲಿ ಪ್ರತಿಯೊಬ್ಬರಿಗೂ ರಕ್ತದ ಅವಶ್ಯಕತೆ ಇರುತ್ತದೆ. ಹೀಗಾಗಿ ಇದನ್ನು ಪ್ರತಿಯೊಬ್ಬ ಜವಾಬ್ದಾರಿಯುತ ನಾಗರಿಕರು ಮನವರಿಕೆ ಮಾಡಿಕೊಳ್ಳಬೇಕಾಗಿದೆ ಎಂದರು. ದೀರ್ಘಕಾಲದ ಕಾಯಿಲೆಗಳು, ಅಪಘಾತ ಸಂದರ್ಭ ಸೇರಿದಂತೆ ವೈದ್ಯಕೀಯ ಚಿಕಿತ್ಸೆಯ ಅಗತ್ಯವಿರುವ ವ್ಯಕ್ತಿಗಳ ಪ್ರಾಣದ ಮೇಲೆ ರಕ್ತವು ನೇರವಾಗಿ ಪರಿಣಾಮ ಬೀರಲಿದೆ. ರಕ್ತದಾನವು ಜೀವಗಳನ್ನು ಉಳಿಸುವುದಲ್ಲದೇ, ರಕ್ತದಾನ ಮಾಡಿದ ವ್ಯಕ್ತಿಯ ಆರೋಗ್ಯ ಕ್ರಮದಲ್ಲಿ ಸುಧಾರಣೆಯಾಗಲಿದೆ ಎಂದರು. ರಕ್ತ ಸಂಗ್ರಹ ವಿಷಯದಲ್ಲಿ ನಿರ್ಣಾಯಕ ಹಂತವನ್ನು ತಲುಪಿದ್ದೇವೆ, ರಕ್ತದಾನದ ದೃಷ್ಟಿಕೋನ ಬದಲಾಗಬೇಕಾಗಿದೆ. ಅನುಕೂಲ ಮತ್ತು ಅನಾನುಕೂಲ ಇವುಗಳ ಕುರಿತು ಸಾಕಷ್ಟು ಚರ್ಚೆಗಳು ನಡೆಯುತ್ತವೆ, ಆದರೆ ಇವುಗಳಿಗೆ ಅವಕಾಶ ಮಾಡಿಕೊಡದೇ ನಾವು ನೀಡಿದಂತಹ ರಕ್ತವು ಸಂಕಷ್ಟದಲ್ಲಿರುವ ಒಬ್ಬ ವ್ಯಕ್ತಿಯ ಜೀವ ಉಳಿಸಲಿದೆ ಎಂಬುದರ ಕುರಿತು ಕನಿಷ್ಟ ಪ್ರಜ್ಞೆ ನಮಗಿರಬೇಕು ಎಂದರು. ವಿದ್ಯಾರ್ಥಿಗಳು ಶಿಕ್ಷಕರು ಸೇರಿದಂತೆ ಶಿಬಿರದಲ್ಲಿ ಒಟ್ಟು 41 ಜನರು ರಕ್ತದಾನ ಮಾಡುವ ಮೂಲಕ ಯಶಸ್ವಿಗೊಳಿಸಿದರು. ರೆಡ್ ಕ್ರಾಸ್ ಸಂಯೋಜಕರಾದ ಡಾ.ಬಿ.ಎನ್. ದೇವೇಂದ್ರಪ್ಪ, ಡಾ.ಪಿ. ಸತೀಶ, ಡಿ. ಶಿವಪ್ಪ, ಸಣ್ಣಗೌಡ್ರ, ಹನುಮಂತರಾಜು, ಡಾ.ವಿ.ಎಂ. ಕಮ್ಮಾರ, ಹನುಮಂತಗೌಡ, ಸುಮನ್ ಸುಲ್ತಾನ ನಾಯಕ್, ಅಮೃತ ಮಡಿವಾಳರ, ಪ್ರಸಾದ ಮಳ್ಳಿ, ಎಫ್.ಎಚ್. ಗಿಡ್ಡಣ್ಣನವರ ಇನ್ನಿತರರಿದ್ದರು.

ರಾಜ್ಯ ಸರ್ಕಾರ ಗ್ಯಾರಂಟಿ ನೀಡುವ ಜತೆಗೆ ಅಭಿವೃದ್ಧಿ ಕೆಲಸ ಕೈಗೊಂಡಿದೆ

ರಾಣೆಬೆನ್ನೂರು : ರಾಜ್ಯ ಸರ್ಕಾರ ಮಹಿಳೆಯರಿಗೆ 5 ಗ್ಯಾರಂಟಿ ನೀಡುವುದರ ಜೊತೆಗೆ ಅಭಿವೃದ್ಧಿ ಕೆಲಸಗಳನ್ನು ಕೈಗೊಂಡಿದೆ ಎಂದು ಅರಣ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಬ್ಯಾಡಗಿ ಶಾಸಕ ಬಸವರಾಜ ಶಿವಣ್ಣನವರ ಹೇಳಿದರು. ಬ್ಯಾಡಗಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ತಾಲೂಕಿನ ಗುಡ್ಡದ ಹೊಸಳ್ಳಿ, ಉಕ್ಕುಂದ, ಗುಡ್ಡದ ಬೇವಿನಹಳ್ಳಿ, ಸುಣಕಲ್ಲಬಿದರಿ ಹೆಡಿಯಾಲ ಗ್ರಾಮಗಳಲ್ಲಿ 7.15 ಕೋಟಿ ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ನೇರವೇರಿಸಿ ಅವರು ಮಾತನಾಡಿದರು. ನಮ್ಮ ಸರ್ಕಾರ 5 ಗ್ಯಾರಂಟಿ ಯೋಜನೆಗೆ 58 ಸಾವಿರ ಕೋಟಿ ವೆಚ್ಚ ಮಾಡುತ್ತಿದೆ. ಇದರಿಂದ ಮಹಿಳೆಯರು ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಪ್ರಗತಿ ಸಾಧಿಸಲು ಸಾಧ್ಯವಾಗಿದೆ. ಗ್ಯಾರಂಟಿಯ ಜೊತೆಗೆ ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗುತ್ತಿದೆ. ವಿರೋಧ ಪಕ್ಷಗಳು ಅಭಿವೃದ್ಧಿ ಕೆಲಸ ಹಿನ್ನಡೆಯಾಗುತ್ತದೆ. ಅಪ್ರಚಾರ ಮಾಡುತ್ತಿದ್ದಾರೆ. ಈಗ 6ನೇ ಗ್ಯಾರಂಟಿ ಭೂ ಒಡೆಯ ಯೋಜನೆಯ ಮೂಲಕ ಲಕ್ಷಾಂತರ ಜನರಿಗೆ ಹಕ್ಕು ಪತ್ರ ವಿತರಣೆ ಮಾಡಲಾಗಿದೆ ಎಂದರು. ಸಂಪುಟ ಪುನಾರಚಣೆಯಲ್ಲಿ ಹೈಕಮಾಂಡ ತೀರ್ಮಾನ ಅಂತಿಮವಾಗಿದೆ. ಜಿಲ್ಲೆಯಲ್ಲಿ ಯಾರಿಗೆ ಕೊಟ್ಟರೂ ಸಂತೋಷ. ಹೈಕಮಾಂಡ್ ಹೇಳಿದಂತೆ ಕೇಳಲಾಗುವುದು ಎಂದರು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ದಾನಪ್ಪ ಚೂರಿ, ವಿ.ಸಿ. ಪೊಲೀಸಗೌಡ್ರ, ಕಾಂಗ್ರೆಸ್ ಮುಖಂಡರಾದ ಮಂಜಣ್ಣ ಅನ್ವೇರಿ, ಈಶಣ್ಣ, ರಂಗನಗೌಡ್ರ, ಸೋಮನಗೌಡ್ರ ಮತ್ತಿತರರಿದ್ದರು.

ಪ್ರವೇಶಾತಿ ಆರಂಭ

ಬ್ಯಾಡಗಿ: ಪಟ್ಟಣದ ಸರ್ಕಾರಿ ಪಾಲಿಟೆಕ್ನಿಕ್ ತಾಂತ್ರಿಕ ಮಹಾವಿದ್ಯಾಲಯದ ಪ್ರಥಮ ವರ್ಷದ ಪ್ರವೇಶಾತಿಗಾಗಿ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಅಹ್ವಾನಿಸಲಾಗಿದೆ. ಈ ಕುರಿತು ಪ್ರಾಚಾರ್ಯ ಚಂದ್ರಶೇಖರ ಘಂಟಿಸಿದ್ದಪ್ಪನವರ ಪ್ರಕಟಣೆ ನೀಡಿದ್ದು, ಪ್ರಥಮ ವರ್ಷದ ಡಿಪ್ಲೊಮಾ ಪದವಿಗಾಗಿ ಸಿವಿಲ್ ಇಂಜಿನಿಯರಿಂಗ್, ಕ್ಲೌಡ್ ಕಂಪ್ಯೂಟಿಂಗ್, ಕಂಪ್ಯೂಟರ್‌ಸೈನ್ಸ್ - ಇಂಜಿನಿಯರಿಂಗ್, ಎಲೆಕ್ಟ್ರಾನಿಕ್ಸ್ - ಕಮ್ಯೂನಿಕೇಶನ್ ಇಂಜಿನಿಯರಿಂಗ್ ವಿಭಾಗಗಳಿಂದ ತಲಾ 63 ಅಭ್ಯರ್ಥಿಗಳಿಗೆ ಅವಕಾಶವಿದ್ದು ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಪ್ರವೇಶ ಪಡೆಯಬಹುದಾಗಿದೆ. ಹೆಚ್ಚಿನ ವಿವರಗಳಿಗಾಗಿ 9481450478 ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸಿ.



ಬ್ಯಾಡಗಿಯಲ್ಲಿ ಸ್ವಯಂ ಪ್ರೇರಿತ ಬೃಹತ್ ರಕ್ತದಾನ ಶಿಬಿರ ಜರುಗಿತು. ಈ ವೇಳೆ ಪ್ರಾಚಾರ್ಯ ಡಾ. ಮಲ್ಲಿಕಾರ್ಜುನ ಕಡ್ಡೀಪುಡಿ, ರೆಡ್ ಕ್ರಾಸ್ ಸಂಯೋಜಕರಾದ ಡಾ.ಬಿ.ಎನ್. ದೇವೇಂದ್ರಪ್ಪ ಮತ್ತಿತರರು ಇದ್ದರು.



ರಾಣೆಬೆನ್ನೂರು ತಾಲೂಕಿನ ಗುಡ್ಡದಹೊಸಳ್ಳಿ ಗ್ರಾಮದಲ್ಲಿ ಶಾಸಕ ಬಸವರಾಜ ಶಿವಣ್ಣನವರ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು. ಈ ವೇಳೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ದಾನಪ್ಪ ಚೂರಿ, ವಿ.ಸಿ. ಪೊಲೀಸಗೌಡ್ರ ಮತ್ತಿತರರು ಇದ್ದರು.



ಹಾವೇರಿ ಹರಸೂರು ಬಣ್ಣದಮಠದ ಜಾತ್ರಾ ಮಹೋತ್ಸವ, ಹರಸೂರು ಬಣ್ಣದ ಮಠದ ಲಿಂ. ಮಲ್ಲಿಕಾರ್ಜುನ ಶಿವಾಚಾರ್ಯ ಶ್ರೀಗಳ ಪುಣ್ಯ ಸ್ಮರಣೋತ್ಸವ ನಿಮಿತ್ತ ಜಗದ್ಗುರು ಪಂಚಾಚಾರ್ಯ ಧ್ವಜಾರೋಹಣ ನೆರವೇರಿತು.

64 ಸರ್ಕಾರಿ ಶಾಲೆ ವಿಲೀನಕ್ಕೆ ಶಿಕ್ಷಣ ಇಲಾಖೆ ಸಿದ್ಧತೆ

ಶಾಲೆಗಳ ವಿಲೀನ ಕ್ರಮಕ್ಕೆ ಜಿಲ್ಲೆಯ ಹಲವು ಗ್ರಾಮಗಳಲ್ಲಿ ವಿರೋಧ | ಗ್ರಾಮಸ್ಥರು ರಸ್ತೆಗೆ ಇಳಿದು ಪ್ರತಿಭಟನೆ

• **ನಾರಾಯಣ ಹೆಗಡೆ**
ಕನ್ನಡಪ್ರಭ ವಾರ್ತೆ ಹಾವೇರಿ

ಶಿಕ್ಷಣದ ಗುಣಮಟ್ಟ ಹೆಚ್ಚಿಸುವ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಹೊಸದಾಗಿ 18 ಕೆಪಿಎಸ್ (ಕರ್ನಾಟಕ ಪಬ್ಲಿಕ್ ಸ್ಕೂಲ್) ಆರಂಭಿಸಲು ತಯಾರಿ ನಡೆಸುತ್ತಿರುವುದು ಸಂತಸದ ಸಂಗತಿಯಾದರೆ, ಇದರ ಜತೆಯಲ್ಲೇ 64 ಸರ್ಕಾರಿ ಶಾಲೆಗಳನ್ನು ವಿಲೀನ ಮಾಡಲು ಶಿಕ್ಷಣ ಇಲಾಖೆ ಪಟ್ಟಿ ಸಿದ್ಧಪಡಿಸಿರುವುದು ಆತಂಕಕ್ಕೆ ಕಾರಣವಾಗಿದೆ.

ಸರ್ಕಾರಿಶಾಲೆಗಳಲ್ಲಿಗುಣಮಟ್ಟಕುಸಿಯುತ್ತಿರುವ ಕಾರಣಕ್ಕೆ ಕೆಪಿಎಸ್ ಶಾಲೆಗಳನ್ನು ಸರ್ಕಾರ ಆರಂಭಿಸಿದೆ. ವಿದ್ಯಾರ್ಥಿಗಳ ಸಂಖ್ಯೆ ಕಡಿಮೆ ಇರುವ ಕಿರಿಯ ಮತ್ತು ಹಿರಿಯ ಪ್ರಾಥಮಿಕ ಶಾಲೆಗಳನ್ನು ಕೆಪಿಎಸ್ ಶಾಲೆಯಲ್ಲಿ ವಿಲೀನಗೊಳಿಸಿ ಗುಣಮಟ್ಟದ ಮತ್ತು ಸ್ಪರ್ಧಾತ್ಮಕತೆ ಹೆಚ್ಚಿಸುವುದು ಇದರ ಉದ್ದೇಶವಾಗಿದೆ.

ಆದರೆ, ಇದೇ ಈಗ ಹಲವು ಕನ್ನಡ ಶಾಲೆಗಳು ಕಾಯಂ ಆಗಿ ಮುಚ್ಚವ ಭೀತಿಯನ್ನು ಎದುರಿಸುವಂತಾಗಿದೆ. ಶಾಲೆಗಳ ವಿಲೀನ ಕ್ರಮಕ್ಕೆ ಜಿಲ್ಲೆಯ ಹಲವು ಗ್ರಾಮಗಳಲ್ಲಿ ವಿರೋಧ ವ್ಯಕ್ತವಾಗುತ್ತಿದ್ದು, ಗ್ರಾಮಸ್ಥರು ರಸ್ತೆಗೆ ಇಳಿದು ಪ್ರತಿಭಟನೆ ನಡೆಸುತ್ತಿದ್ದಾರೆ.

FILE PHOTO



ಜಿಲ್ಲೆಯಲ್ಲಿಯೂ 18 ಕೆಪಿಎಸ್ ಶಾಲೆಗಳು ಆರಂಭವಾಗುತ್ತಿದ್ದು, ಈ ಶಾಲೆಗಳ ಸುತ್ತಮುತ್ತಲಿನ ಅರ್ಧ ಕಿಮೀನಿಂದ 5 ಕಿಮೀ ವ್ಯಾಪ್ತಿಯೊಳಗಿನ ಸರ್ಕಾರಿ ಶಾಲೆಗಳನ್ನು ವಿಲೀನಗೊಳಿಸುವ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲಾಗಿದೆ. ಇಲಾಖೆಯ ಹಿರಿಯ ಅಧಿಕಾರಿಗಳು ಒಪ್ಪಿಗೆ ನೀಡುತ್ತಿದ್ದಂತೆ, ಶಾಲೆಗಳು ವಿಲೀನವಾಗಲಿವೆ.

5 ಕಿ.ಮೀ.ನಿಂದ 12 ಕಿಮೀ ದೂರದಲ್ಲಿರುವ ಸರ್ಕಾರಿ ಶಾಲೆಗಳನ್ನು, ಕೆಪಿಎಸ್ ಜೊತೆ ವಿಲೀನ ಮಾಡುವ ಬಗ್ಗೆಯೂ ಚಿಂತನೆ ನಡೆಸಲಾಗಿದೆ. ಆದರೆ, ಗ್ರಾಮೀಣ ಭಾಗದಲ್ಲಿ ಇದು ಮಕ್ಕಳಿಗೆ ಹೋಗಿ ಬರಲು ಸಮಸ್ಯೆಯಾಗುತ್ತದೆ ಎಂಬ ಕಾರಣಕ್ಕೆ ಅಷ್ಟು ದೂರದ ಶಾಲೆಗಳ ವಿಲೀನ ಪ್ರಕ್ರಿಯೆಯನ್ನು ಸದ್ಯಕ್ಕೆ ಸ್ಥಗಿತಗೊಳಿಸಲಾಗಿದೆ. ಆದರೂ ಕೆಲವು ಕಡೆಗಳಲ್ಲಿ 12 ಕಿಮೀ ದೂರವಿರುವ ಶಾಲೆಗಳನ್ನು ವಿಲೀನ ಮಾಡಲು ಒಪ್ಪಿಗೆ ಸಿಕ್ಕಿರುವುದಕ್ಕೆ ಜನರು ಆಕ್ರೋಶ ಹೊರಹಾಕುತ್ತಿದ್ದಾರೆ.

> ಹಿರಿಯ ಅಧಿಕಾರಿಗಳ ನಿರ್ದೇಶನದಂತೆ, ಕೆಪಿಎಸ್ ಶಾಲೆಗಳ ಜತೆಯಲ್ಲಿ ವಿಲೀನ ಮಾಡಬಹುದಾದ ಸರ್ಕಾರಿ ಶಾಲೆಗಳ ಪಟ್ಟಿಯನ್ನು ಸಿದ್ಧಪಡಿಸಿ ಸಲ್ಲಿಸಲಾಗಿದೆ. ಅಧಿಕಾರಿಗಳು ಪರಿಶೀಲನೆ ನಡೆಸಿ, ಪಟ್ಟಿಗೆ ಒಪ್ಪಿಗೆ ನೀಡಿದ ನಂತರವೇ ಶಾಲೆಗಳು ಆಡಳಿತಾತ್ಮಕವಾಗಿ ವಿಲೀನವಾಗಲಿವೆ. ವಿಲೀನ ಎಂದರೆ ಶಾಲೆಗಳನ್ನು ಮುಚ್ಚುವುದಲ್ಲ.
> • **ಮೋಹನ ದಂಡಿನ** ಡಿಡಿಪಿಐ ಹಾವೇರಿ

ನಾಲ್ಕು ಶಾಲೆ ಮುಚ್ಚಿ: ಶಾಲೆಗಳ ವಿಲೀನವೆಂದರೆ, ಒಂದು ಶಾಲೆಯನ್ನು ಮುಚ್ಚಿ ಮತ್ತೊಂದು ಶಾಲೆ ತೆರೆಯುವುದಲ್ಲ. ಕೇವಲ ಆಡಳಿತಾತ್ಮಕ ಕೆಲಸಗಳು ಮಾತ್ರ ವಿಲೀನವಾಗುತ್ತವೆ. ಇದರಿಂದಾಗಿ ಹಳ್ಳಿಯ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ಸಿಗಲಿದೆ. ಇದು ಅಧಿಕಾರಿಗಳು ಹೇಳುವ ಸಿದ್ಧ ಉತ್ತರ. ಆದರೆ, ವಾಸ್ತವವಾಗಿ ಶಾಲೆ ಮುಚ್ಚಿಯೇ ಕೆಪಿಎಸ್‌ನಲ್ಲಿ ವಿಲೀನಗೊಳಿಸಬೇಕಾಗುತ್ತದೆ. ಇದು ಗ್ರಾಮೀಣ ಭಾಗದ ಪಾಲಕರಲ್ಲಿ ಆತಂಕ ಹುಟ್ಟಿಸಿದೆ. ಒಂದು ವೇಳೆ ಈಗ ಶಾಲೆ ಮುಚ್ಚಿದರೆ ಮುಂದೆ ತಮ್ಮೂರಿನ ಶಾಲೆ ಶಾಶ್ವತವಾಗಿ ಮುಚ್ಚುತ್ತದೆ ಎಂಬ ಆತಂಕವನ್ನು ವ್ಯಕ್ತಪಡಿಸುತ್ತಿದ್ದಾರೆ. ಒಂದು ಶಾಲೆ ಆರಂಭಿಸಿ ನಾಲ್ಕು ಶಾಲೆ ಬಂದ್ ಮಾಡುವುದರೆ ಏನು ಪ್ರಯೋಜನ ಎಂದು ಪ್ರಶ್ನಿಸುತ್ತಿದ್ದಾರೆ. ಸರ್ಕಾರ ಕನ್ನಡ ಶಾಲೆಗಳನ್ನು ಉಳಿಸುವುದನ್ನು ಬಿಟ್ಟು ಈ ರೀತಿ ಮುಚ್ಚಲು ಹೊರಟಿರುವುದು ಸರಿಯಲ್ಲ ಎಂಬ ಅಭಿಪ್ರಾಯ ವ್ಯಕ್ತಪಡಿಸುತ್ತಿದ್ದಾರೆ.

ಕನ್ನಡ ಶಾಲೆಗಳ ಅವನತಿ?: ಕೆಪಿಎಸ್ ಶಾಲೆಗಳ ಜತೆಗೆ, ಸುತ್ತಮುತ್ತಲಿನ ಗ್ರಾಮಗಳ ಶಾಲೆಗಳನ್ನು ವಿಲೀನ ಮಾಡುತ್ತಿರುವುದು ಕೆಲ ಗ್ರಾಮಸ್ಥರ ಆಕ್ರೋಶಕ್ಕೆ ಕಾರಣವಾಗಿದೆ. ವಿಲೀನ ಮಾಡಿದರೆ, ಸರ್ಕಾರಿ ಶಾಲೆಗಳು ಬಾಗಿಲು ಮುಚ್ಚಲಿವೆ. ಇದರಿಂದ ಕನ್ನಡ ಶಾಲೆಗಳ ಅವನತಿ ಆಗಲಿದೆ ಎಂದು ದೂರುತ್ತಿದ್ದಾರೆ.

ಶಾಲೆಗಳನ್ನು ವಿಲೀನ ಮಾಡಿದರೆ, ಎಲ್ಲ ವಿದ್ಯಾರ್ಥಿಗಳು ಕೆಪಿಎಸ್ ಶಾಲೆಗೆ ಹೋಗುತ್ತಾರೆ. ಹಳ್ಳಿಯಲ್ಲಿರುವ ಶಾಲೆಗಳು ವಿದ್ಯಾರ್ಥಿಗಳ ಕೊರತೆಯಿಂದ ಬಾಗಿಲು ಮುಚ್ಚಬೇಕಾಗುತ್ತದೆ. ಇದರಿಂದ ಕನ್ನಡ ಶಾಲೆಗಳು ಒಂದೊಂದಾಗಿ ಬಾಗಿಲು ಮುಚ್ಚುತ್ತವೆ ಎಂದು ಪಾಲಕರು ಅಳಲು ತೋಡಿಕೊಳ್ಳುತ್ತಿದ್ದಾರೆ.

ಶಿಗ್ಗಾಂವಿ ತಾಲೂಕಿನ ಸೂರಪಗಟ್ಟಿ ಗ್ರಾಮದಲ್ಲಿ ಇತ್ತೀಚೆಗೆ ಪ್ರತಿಭಟನೆ ನಡೆಸಿದ್ದ ಗ್ರಾಮಸ್ಥರು, ತಮ್ಮೂರಿನ ಶಾಲೆಗಳನ್ನು ಕೋಣನಕೇರಿಯ ಕೆಪಿಎಸ್ ಜತೆಗೆ ವಿಲೀನ ಮಾಡಬಾರದು ಎಂದು ಆಗ್ರಹಿಸಿದರು. ಹಿರೇಬೆಂಡಿಗೇರಿ ಶಾಲೆಗೆ ಬೆಳವಲಕೊಪ್ಪ, ಸುರುಪಗಟ್ಟಿ, ಬಳಗಲಿ, ಚಿಕ್ಕಬೆಂಡಿಗೇರಿ ಕನ್ನಡ, ಚಿಕ್ಕಬೆಂಡಿಗೇರಿ ಉರ್ದು, ಹಿರೇಬೆಂಡಿಗೇರಿ ಪ್ಲಾಟ್ ಸೇರಿ ಆರು ಸರ್ಕಾರಿ ಶಾಲೆಗಳನ್ನು ವಿಲೀನಗೊಳಿಸಲಾಗುತ್ತಿದೆ.

ಕೋಣನಕೇರಿ ಶಾಲೆಗೆ ಭದ್ರಾಪುರ, ಮುಳ್ಕೇರಿ ಮತ್ತು ಶ್ಯಾಬಾಳ ಸರ್ಕಾರಿ ಶಾಲೆಗಳನ್ನು ವಿಲೀನ ಮಾಡಲಾಗುತ್ತಿದೆ ಎಂದು ಗ್ರಾಮಸ್ಥರು ಮಾಹಿತಿ ನೀಡಿದರು. ಒಟ್ಟಿನಲ್ಲಿ ಬರುವ ಶೈಕ್ಷಣಿಕ ಸಾಲಿನಲ್ಲೇ ಹಲವು ಕನ್ನಡ ಶಾಲೆಗಳು ಮುಚ್ಚುವ ಆತಂಕವಂತೂ ಎದುರಾಗಿದೆ.

ಜ್ಞಾನದ ಬೆಳಕು ನೀಡಿ ಮಕ್ಕಳ ಬಾಳು ಬೆಳಗುವ ಶಿಕ್ಷಕರು



ಸವಣೂರ ತಾಲೂಕಿನ ಕುಣಿಮೆಳ್ಳಿಹಳ್ಳಿ ಗ್ರಾಮದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಗುರುವಂದನಾ ಮತ್ತು ಸ್ನೇಹ ಸಮ್ಮೇಳನ ಕಾರ್ಯಕ್ರಮ ನಡೆಯಿತು.

• **ಕನ್ನಡಪ್ರಭ ವಾರ್ತೆ** ಹಾವೇರಿ

ನಾವೆಲ್ಲರೂ ದೀಪದ ಬೆಳಕಿನಲ್ಲಿ ಬದುಕುತ್ತಿದ್ದೇವೆ. ಹಸಿರಿಗೆ ನೀರು ಎರೆಯುವ ಮೂಲಕ ಪ್ರಕೃತಿ ಮಾತೆಯನ್ನು ಬೆಳಗಿಸುತ್ತಿದ್ದೇವೆ. ಇಲ್ಲಿ ಅದೇ ರೀತಿ ಶಿಕ್ಷಕರು ಜ್ಞಾನ ಅನ್ನೋ ಬೆಳಕನ್ನು ವಿದ್ಯಾರ್ಥಿಗಳಿಗೆ ನೀಡಿ ಮಕ್ಕಳ ಬಾಳು ಬೆಳಗಿದ್ದಾರೆ ಎಂದು ಕೂಡಲದ ಶ್ರೀಗುರು ಮಹೇಶ್ವರ ಸ್ವಾಮೀಜಿ ಹೇಳಿದರು. ಸವಣೂರ ತಾಲೂಕಿನ ಕುಣಿಮೆಳ್ಳಿಹಳ್ಳಿ ಗ್ರಾಮದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ 1997-1998 ಹಾಗೂ 1998-1999ನೇ ಸಾಲಿನ 7ನೇ ತರಗತಿಯ ವ್ಯಾಸಂಗ ಮಾಡಿದ ವಿದ್ಯಾರ್ಥಿ ಗಳಿಂದ ನಡೆದ ಗುರುವಂದನಾ ಮತ್ತು ಸ್ನೇಹ ಸಮ್ಮೇಳನ ಕಾರ್ಯಕ್ರಮದ ಸಾನ್ನಿಧ್ಯವಹಿಸಿ ಅವರು ಮಾತನಾಡಿದರು. ಜ್ಞಾನ ಎನ್ನುವ ಬೇರಿಗೆ ಜ್ಞಾನಾಮೃತವನ್ನು ಉಣಬಡಿಸಿ ವಿದ್ಯಾರ್ಥಿಗಳ ಬದುಕನ್ನು ಹೆಮ್ಮರವಾಗಿಸಿದ ಕೀರ್ತಿ ಶಿಕ್ಷಕರಿಗೆ ಸಲ್ಲುತ್ತದೆ. ಎಲ್ಲ ಗ್ರಹಗಳಲ್ಲಿ ಅತಿದೊಡ್ಡ ಗ್ರಹ ಎಂದರೆ ಅದು ಗುರುಗ್ರಹ. ಹಾಗೆಯೇ ಎಲ್ಲ ಸ್ಥಾನಗಳಲ್ಲಿ ಗುರುನೇ ಮುಖ್ಯ. ಜೀವನದಲ್ಲಿ ಎತ್ತರ ಬೆಳೆದು ಸಮಾಜದಲ್ಲಿ ಗೌರವಾನ್ವಿತ ಸ್ಥಾನದಲ್ಲಿರಲು ಬೇಕಾದ ಅಕ್ಷರ ಹಾಗೂ ಮೌಲ್ಯದ ಅಡಿಪಾಯ ಹಾಕಿದ ಶಾಲೆಗೆ ಹಾಗೂ ಶಿಕ್ಷಕರಿಗೆ ವಂದನೆಗಳನ್ನು ತಿಳಿಸುವ ಒಂದು ವೇದಿಕೆ ಗುರುವಂದನಾ ಕಾರ್ಯಕ್ರಮ ಎಂದು ನುಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪಿ.ಎಸ್. ಹಿರೇಮಠ ಮಾತನಾಡಿ, ಅಕ್ಷರ ಕಲಿಸಿದ ಗುರುಗಳಿಗೆ ವಂದನೆ ಸಲ್ಲಿಸುವ ಜೊತೆಗೆ ಹಳೆಯ ಶಾಲೆ ಸ್ನೇಹಿತರನ್ನ ಭೇಟಿಯಾಗಬೇಕು ಎನ್ನುವುದು ಪ್ರತಿಯೊಬ್ಬ ವಿದ್ಯಾರ್ಥಿಯ ಕನಸಾಗಿರುತ್ತದೆ. ಆ ಕನಸನ್ನು ನನಸು ಮಾಡೋದು ಅಷ್ಟು ಸುಲಭವಲ್ಲ. ಎಲ್ಲರನ್ನೂ ಒಟ್ಟಾಗಿ ಸೇರಿಸಿ, ಎಲ್ಲಾ ಶಿಕ್ಷಕರನ್ನು ಒಗ್ಗೂಡಿಸಿ ಒಂದೇ ವೇದಿಕೆ ಮೇಲೆ ಸನ್ಮಾನಿಸೋದು ಅತ್ಯಂತ ಕಷ್ಟದ ಕೆಲಸ. ಆದರೆ ಪ್ರಯತ್ನ ಪಟ್ಟರೆ ಅದು ಕೂಡ ಸಾಧ್ಯ ಎಂಬುವುದನ್ನು ಕುಣಿಮೆಳ್ಳಿಹಳ್ಳಿ ವಿದ್ಯಾರ್ಥಿಗಳು ತೋರಿಸಿದ್ದಾರೆ. ನೀವು ಕಲಿತ ಶಾಲೆಯನ್ನು ಎಂದು ಮರೆಯಬಾರದು. ಮುಂದಿನ ದಿನಗಳಲ್ಲಿ ಕುಣಿಮೆಳ್ಳಿಹಳ್ಳಿ ಶಾಲೆಯ ಶತಮಾನೋತ್ಸವವನ್ನು ನಾವೆಲ್ಲರೂ ಅದ್ದೂರಿಯಾಗಿ ಆಚರಿಸೋಣ ಎಂದರು.

ಗುರುಗಳಿಗೆ ಸನ್ಮಾನ: ಶಿಕ್ಷಕರಾದ ಎಂ.ಬಿ. ಭರಮಣ್ಣನವರ, ರೇಣುಕಾ ಜಾಧವ್, ಎನ್.ವಿ. ಕಲಕೋಟಿ, ಬಿ.ಜಿ. ಕಂಕಣವಾಡ, ಟಿ.ಎಲ್. ಲಮಾಣಿ, ಎನ್.ಎಂ. ಮುತ್ತುಬಾಯಿ, ಎಂ.ಎ. ಅಕ್ಕಿ, ಎಸ್.ಎನ್. ಕಾಯಕದ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಅಗಲಿದ ಗುರುಗಳಾದ ಎಸ್.ಬಿ. ಹಿರೇಮಠ, ಟಿ.ಎಸ್. ಅಜ್ಜಣ್ಣನವರ, ಬಿ.ಎ. ಅಂಗಡಿ ಅವರನ್ನು ಸ್ಮರಿಸಲಾಯಿತು. ಈ ಸಂದರ್ಭದಲ್ಲಿ ಹಳೆ ವಿದ್ಯಾರ್ಥಿಗಳು, ಗ್ರಾಮದ ಮುಖಂಡರು ಮತ್ತು ಶಿಕ್ಷಕರು, ಮಕ್ಕಳು ಮತ್ತಿತರರು ಇದ್ದರು. ಗೌರಮ್ಮ ಗುರುನಂಜಪ್ಪ ಅಗಡಿ ಮತ್ತು ನಾಗರತ್ನ ಆಡೂರು ಪ್ರಾರ್ಥಿಸಿದರು. ಪ್ರಕಾಶ ಸೂರದ ಸ್ವಾಗತಿಸಿದರು. ಕಾಂತೇಶ ಉದ್ದಣ್ಣನವರ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಂಜುನಾಥ ಮುಗದೂರು ನಿರ್ವಹಿಸಿದರು.

ರಸ್ತೆಗಳು ದೇಶದ ಅಭಿವೃದ್ಧಿಯ ಸಂಕೇತ

• **ಕನ್ನಡಪ್ರಭ ವಾರ್ತೆ** ಹಿರೇಕೆರೂರು

ರಸ್ತೆಗಳು ದೇಶದ ಅಭಿವೃದ್ಧಿಯ ಸಂಕೇತವಾಗಿವೆ. ಉತ್ತಮ ರಸ್ತೆಗಳಿಂದ ಆರ್ಥಿಕ ಪ್ರಗತಿ ಕಾಣಲು ಸಾಧ್ಯವಾಗುವ ಜತೆಗೆ ಸಂಚಾರಕ್ಕೆ ಮತ್ತು ಸರಕು ಸಾಗಾಣಿಕೆಗೆ ಅನುಕೂಲವಾಗುತ್ತವೆ ಎಂದು ಶಾಸಕ ಯು.ಬಿ. ಬಣಕಾರ ಹೇಳಿದರು.

ತಾಲೂಕಿನ ಜೋಗಿಹಳ್ಳಿ ಗ್ರಾಮದಲ್ಲಿ ಮುಖ್ಯಮಂತ್ರಿಗಳ ಮೂಲ ಸೌಕರ್ಯ ಅಭಿವೃದ್ಧಿ ಯೋಜನಯಡಿ ರು. ಕೋಟಿ ವೆಚ್ಚದಲ್ಲಿ ಮಂಜೂರಾದ ತಾವರಗಿ ಬಿಲ್ಲಳ್ಳಿ ರಸ್ತೆಯಿಂದ ಮಾಸೂರು ಗುತ್ತಲ ರಸ್ತೆಯ ಆಯ್ದ ಭಾಗಗಳಲ್ಲಿ ರಸ್ತೆ ಅಭಿವೃದ್ಧಿಪಡಿಸುವ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರ ಗ್ರಾಮೀಣ ಪ್ರದೇಶಗಳ ಜನತೆಗೆ ಮೂಲ ಸೌಕರ್ಯ ಒದಗಿಸಿ ಅವರಿಗೆ ನೆಮ್ಮದಿಯ ಬದುಕು ಸಾಗಿಸಲು ಅನುಕೂಲವಾಗುವಂತೆ ಸರ್ಕಾರ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸಿ ರಸ್ತೆ, ಚರಂಡಿ, ಸಿಡಿ ನಿರ್ಮಾಣ, ಕಾಂಕ್ರೀಟ್ ರಸ್ತೆಯಂತಹ ಕಾಮಗಾರಿ ಕೈಗೆತ್ತಿಕೊಂಡು ಅವುಗಳನ್ನು ನಿರ್ವಹಿಸುವ ಮೂಲಕ ಗ್ರಾಮೀಣ ಜನತೆಗೆ ಅನಕೂಲ ಕಲ್ಪಿಸುವ ಕಾರ್ಯ ಮಾಡುತ್ತಿದೆ, ಸರ್ಕಾರದ ಎಲ್ಲ ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡು ಗ್ರಾಮಗಳನ್ನು ಅಭಿವೃದ್ಧಿಪಡಿಸಿಕೊಳ್ಳಬೇಕು ಎಂದರು.

ಈ ಕಾಮಗಾರಿಯಲ್ಲಿ ಕಾಂಕ್ರೀಟ್ ರಸ್ತೆ, ಡಾಂಬರೀಕರಣ, ಕಾಂಕ್ರೀಟ್ ಚರಂಡಿ, ಸಿಡಿ ನಿರ್ಮಾಣ ಕೆಲಸ ಹೊಂದಿದ್ದು, ಗುತ್ತಿಗೆದಾರರು ನಿಗದಿತ ಕಾಲ ಮಿತಿಯಲ್ಲಿಗುಣಮಟ್ಟದ ಕಾಮಗಾರಿ ನಿರ್ವಹಿಸಿ ಸಾರ್ವಜನಿಕರಿಗೆ ಅನಕೂಲ ಕಲ್ಪಿಸಿಕೊಡಬೇಕು ಸಂಬಂಧಿಸಿದ ಅಧಿಕಾರಿಗಳು ಕಾಲಕಾಲಕ್ಕೆ ಕಾಮಗಾರಿ ಮೇಲುಸ್ತುವಾರಿ ನಡೆಸಿ ಕಾಮಗಾರಿಯ ಗುಣಮಟ್ಟ ಕಾಯ್ದುಕೊಳ್ಳಬೇಕು ಎಂದು ಸೂಚಿಸಿದರು.

ಗ್ರಾಪಂ ಮಾಜಿ ಅಧ್ಯಕ್ಷ ಈರಪ್ಪ ಗುಬ್ಬೇರ, ಸೇರಿದಂತೆ, ಗ್ರಾಮಸ್ಥರು ಅಧಿಕಾರಿಗಳು ಹಾಜರಿದ್ದರು.



ಹಿರೇಕೆರೂರು ತಾಲೂಕಿನ ಜೋಗಿಹಳ್ಳಿ ಗ್ರಾಮದಲ್ಲಿ ರಸ್ತೆ ಅಭಿವೃದ್ಧಿಪಡಿಸುವ ಕಾಮಗಾರಿಗೆ ಶಾಸಕ ಯು.ಬಿ. ಬಣಕಾರ ಭೂಮಿಪೂಜೆ ನೆರವೇರಿಸಿದರು.

> ಸರ್ಕಾರದ ಎಲ್ಲ ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡು ಗ್ರಾಮಗಳನ್ನು ಅಭಿವೃದ್ಧಿಪಡಿಸಿಕೊಳ್ಳಬೇಕು.
> • **ಯು.ಬಿ. ಬಣಕಾರ** ಶಾಸಕ

ಕೃಷಿ ಪರಿಕರ ಮಾರಾಟಗಾರರ ಸಭೆ ಮುಂದೂಡಿಕೆ



ಕೃಷಿ ಇಲಾಖೆ ಆಯೋಜಿಸಿದ ಸಭೆಯ ಗೊಂದಲ ನಿವಾರಿಸಲು ಅಧಿಕಾರಿಗಳು, ರೈತ ಪ್ರತಿನಿಧಿಗಳು ಚರ್ಚಿಸುತ್ತಿರುವುದು.

• **ಕನ್ನಡಪ್ರಭ ವಾರ್ತೆ** ಹಾನಗಲ್ಲ

ಕೃಷಿ ಇಲಾಖೆ ಆಯೋಜಿಸಿದ ರೈತ ಸಂಘಗಳು, ಕೃಷಿ ಪರಿಕರ ಮಾರಾಟಗಾರರು, ರೈತರ ಸಭೆ ಗೊಂದಲದ ಗೂಡಾಗಿ, ರೈತರು ಸಭೆಯಿಂದ ಹೊರ ನಡೆದ ಪರಿಣಾಮವಾಗಿ ಸಭೆಯೆ ಮುಂದೂಡಿತು.

ಹಾನಗಲ್ಲ ಸಮೀಪದ ನಾಲ್ಕರ ಕ್ರಾಸ್ ಬಳಿ ಇರುವ ರೋಶನಿ ಸಮಾಜಸೇವಾ ಸಂಸ್ಥೆಯ ಸಭಾಂಗಣದಲ್ಲಿನಡೆದ ಕೃಷಿ ಇಲಾಖೆಯ ಸಭೆ ಒಂದು ಗಂಟೆ ತಡವಾಗಿ 12 ಗಂಟೆಗೆ ಆರಂಭವಾಯಿತು. ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಸಿ.ಟಿ.ಸುರೇಶ ಸಭೆಯ ಪ್ರಾಸ್ತಾವಿಕ ಮಾತು ಆರಂಭಿಸಿದರಾದರೂ ಅವರ ಮಾತು ಯಾರಿಗೂ ಕೇಳಲಾರದಷ್ಟು ಸಭಾಂಗಣ ಪ್ರತಿಧ್ವನಿಸುತ್ತಿತ್ತು. ಕೂಡಲೇ ಸಭೆಯ ಸ್ಥಳ ಬದಲಿಸಿ ಎಂದು ಮನವಿ ರೈತರು ಮಾಡಿದರು. ಅದಕ್ಕೆ ಕ್ಯಾರೆ ಎನ್ನದ ಅಧಿಕಾರಿಗಳು ಸಭೆ ಮುಂದುವರೆಸಿದರು.

ಸಭೆಗೆ ತಾಲೂಕಿನ 152 ಕೃಷಿ ಪರಿಕರ ಮಾರಾಟಗಾರರು ಆಗಮಿಸಬೇಕಾಗಿತ್ತು. ಆದರೆ ಕೆಲವೇ ಕೆಲವು ಮಾರಾಟಗಾರರು ಬಂದಿರುವುದನ್ನು ಗಮನಿಸಿದ ರೈತ ಸಂಘದ ತಾಲೂಕು ಕಾರ್ಯದರ್ಶಿ ರುದ್ರಪ್ಪ ಹಣ್ಣಿ ಸಭೆ ನಡೆಸುತ್ತಿರುವುದೇ ಅಪ್ರಸ್ತುತ. ಕಳೆದ ವರ್ಷವೂ ಕೂಡ ಹೀಗೇ ಪರಿಕರ ಮಾರಾಟಗಾರರು ಸರಿಯಾದ ಸಂಖ್ಯೆಯಲ್ಲಿ ಇಲ್ಲದೆ ಸಭೆ ನಡೆಸಲು ಮುಂದಾಗಿ ಸಭೆ ಮುಂದೂಡಿತ್ತು. ಮತ್ತೆ ಅದೇ ಕ್ರಮಕ್ಕೆ ಕೃಷಿ ಅಧಿಕಾರಿಗಳು ಮುಂದಾಗಿದ್ದಾರೆ. ಇದು ಜಾಣ ಕುರುಡು ನೀತಿ. ಇದನ್ನು ನಾವು ಪ್ರತಿಭಟಿಸುತ್ತೇವೆ. ರೈತರನ್ನು ಕರೆದು ಕಾಟಾಚಾರಕ್ಕೆ ಸಭೆ ಮಾಡುವುದಾದರೆ ಸಭೆಯ ಅಗತ್ಯವೇನು ಎಂದು ತರಾಟೆಗೆ ತೆಗೆದುಕೊಂಡರು. ರೈತರು ಸಭೆಯಿಂದ ಹೊರನಡೆಯಲು ಮುಂದಾದರು. ಮಧ್ಯೆ ಪ್ರವೇಶಿಸಿದ ಜಿಲ್ಲಾ ಕೃಷಿ ಉಪನಿರ್ದೇಶಕ ಶಿವಕುಮಾರ ಮಲ್ಲಾಡದ ಈಗ ಈ ಸಭೆ ನಡೆಸೋಣ. ಮತ್ತೊಂದು ಸಭೆ ಕರೆಯೋಣ. ಈಗ ಈ ಸಭೆಗೆ ಬಾರದ ಪರಿಕರ ಮಾರಾಟಗಾರರಿಗೆ ನೋಟಿಸ್ ಜಾರಿ ಮಾಡಿ ಕ್ರಮ ಜರುಗಿಸೋಣ ಎಂದು ಸಭೆಯನ್ನು ನಡೆಸಲು ಅನುಮತಿ ಕೇಳಿದರು. ಆದರೆ ರೈತರು ಅದನ್ನು ಒಪ್ಪದೇ ಸಭೆ ಮುಂದೂಡುವಂತೆ ಬಲವಾಗಿ ಒತ್ತಾಯಿಸಿದರು. ನಂತರ ಸಹಾಯಕ ಕೃಷಿ ನಿರ್ದೇಶಕ ಸಿ.ಟಿ. ಸುರೇಶ, ರೈತ ಸಂಘದ ಇಬ್ಬರು ಅಧ್ಯಕ್ಷರಾದ ಮರಿಗೌಡ ಪಾಟೀಲ, ಎಂ.ಎಸ್. ಪಾಟೀಲ, ಕೃಷಿ ಪರಿಕರ ಮಾರಾಟಗಾರರ ಸಂಘದ ಅಧ್ಯಕ್ಷ ಸುರೇಶಗೌಡ ಪಾಟೀಲ, ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ವಿಜಯಕುಮಾರ ದೊಡ್ಡಮನಿ, ಕೃಷಿಕ ಸಮಾಜದ ಅಧ್ಯಕ್ಷ ಕೆ.ಟಿ. ಕಲಗೌಡರ ನಡುವೆ ಚರ್ಚೆ, ಮಾತಿನ ಚಕಮಕಿ ನಡೆದು ಅಂತಿಮವಾಗಿ ಸಭೆ ಮುಂದೂಡಲು ನಿರ್ಣಯಿಸಲಾಯಿತು. ಮುಂದಿನ ಸಭೆಯ ದಿನಾಂಕ ಹಾಗೂ ಸ್ಥಳದ ಬಗೆಗೆ ಮಾಹಿತಿ ನೀಡುವುದಾಗಿ ಸಹಾಯಕ ಕೃಷಿ ನಿರ್ದೇಶಕ ಸಿ.ಟಿ. ಸುರೇಶ ಪ್ರಕಟಿಸಿದ ನಂತರ ಸಭೆಯಿಂದ ಎಲ್ಲರೂ ಹೊರನಡೆದರು.

ಜಿಲ್ಲಾ ಕೃಷಿ ಉಪನಿರ್ದೇಶಕ ಶಿವಕುಮಾರ ಮಲ್ಲಾಡದ, ಕೃಷಿ ಅಧಿಕಾರಿ ಸಂಗಮೇಶ ಹಕ್ಲಪ್ಪನವರ, ತಾಲೂಕು ಗ್ಯಾರಂಟಿ ಸಮಿದಿ ಅಧ್ಯಕ್ಷ ವಿಜಯಕುಮಾರ ದೊಡ್ಡಮನಿ, ಕೆಡಿಪಿ ಸದಸ್ಯರಾದ ಮಹಮ್ಮದಹನಿಫ್ ಬಂಕಾಪೂರ, ರಾಜು ಜೋಗಪ್ಪನವರ, ರೈತ ಸಂಘದ ಜಿಲ್ಲಾ ಉಪಾಧ್ಯಕ್ಷ ಅಡಿವೆಪ್ಪ ಆಲದಕಟ್ಟಿ, ಮಲ್ಲೇಶಪ್ಪ ಪರಪ್ಪನವರ.ಕೃಷಿಕ ಸಮಾಜದ ಅಧ್ಯಕ್ಷ ಕೆ.ಟಿ. ಕಲಗೌಡರ, ರೈತ ಸಂಘದ ಅಧ್ಯಕ್ಷರಾದ ಮರಿಗೌಡ ಪಾಟೀಲ, ಎಂ.ಎಸ್. ಪಾಟೀಲ, ಚನ್ನಬಸಪ್ಪ ಹಾವಣಗಿ, ಕೃಷಿ ಪರಿಕರ ಮಾರಾಟಗಾರರ ಸಂಘದ ಅಧ್ಯಕ್ಷ ಸುರೇಶಗೌಡ ಪಾಟೀಲ, ಮಹೇಶ ಬಣಕಾರ, ಸಂಕನಗೌಡ ದೇವೀಕೊಪ್ಪ, ಶಿವಲಿಂಗಪ್ಪ ತಲ್ಲೂರ, ಪಂಚಾಕ್ಷರಿಗೌಡ ಪಾಟೀಲ, ಬಿ.ವಿ.ಶಿರಡಿಮಠ, ಬಸವರಾಜ ಉತ್ತಂಗಿ ಮೊದಲಾದವರು ಈ ಸಂದರ್ಭದಲ್ಲಿದ್ದರು.

ಚಾಲನೆ | ಕಂಪ್ಯೂಟರ್ ಪ್ರಯೋಗಾಲಯ ಉದ್ಘಾಟನೆ | ಗ್ರಾಮೀಣ ಪ್ರದೇಶದ ಮಕ್ಕಳಿಗೆ ಅನುಕೂಲ

ಗ್ರಾಮೀಣ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಅಗತ್ಯ

• **ಕನ್ನಡಪ್ರಭ ವಾರ್ತೆ** ಹಾನಗಲ್ಲ

ತಾಲೂಕಿನ ಸರಕಾರಿ ಶಾಲೆಗಳು ಸುಧಾರಣೆ ಕಾಣಬೇಕು, ಗ್ರಾಮೀಣ ಪ್ರದೇಶದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರಕಬೇಕು. ಈ ನಿಟ್ಟಿನಲ್ಲಿ ಕಾಳಜಿ ವಹಿಸಿ ಕೆಲಸ ಮಾಡಲಾಗುತ್ತಿದೆ. ಸಮುದಾಯ ಹಾಗೂ ಸಂಘ, ಸಂಸ್ಥೆಗಳ ಸಹಭಾಗಿತ್ವದಡಿ ಶಾಲೆಗಳಿಗೆ ಸೌಲಭ್ಯ ಕಲ್ಪಿಸಿ ಕಲಿಕೆಗೆ ಪೂರಕ ವಾತಾವರಣ ಸೃಷ್ಟಿಸಲು ಗಮನ ನೀಡಲಾಗಿದೆ ಎಂದು ಶಾಸಕ ಶ್ರೀನಿವಾಸ ಮಾನೆ ಹೇಳಿದರು.

ತಾಲೂಕಿನ ಶೀಗಿಹಳ್ಳಿ ಗ್ರಾಮದ ಸರಕಾರಿ ಪ್ರಾಥಮಿಕ ಶಾಲೆಯಲ್ಲಿ ಬೆಂಗಳೂರಿನ ಶಿಫಾರ್‌ಸೊಸೈಟಿ ವತಿಯಿಂದ ನೂತನವಾಗಿ ನಿರ್ಮಿಸಿದ ಕಂಪ್ಯೂಟರ್‌ಪ್ರಯೋಗಾಲಯ ಉದ್ಘಾಟಿಸಿ ಅವರು ಮಾತನಾಡಿದರು.

ದೇಶದ75 ನೇ ಸ್ವಾತಂತ್ರ್ಯ ದಿನಾಚರಣೆಯ ಸಂದರ್ಭದಲ್ಲಿ 50%-50% ಎನ್ನುವ ಕಾರ್ಯಕ್ರಮದ ಘೋಷಣೆ ಮಾಡಲಾಗಿತ್ತು. ಈ ಕಾರ್ಯಕ್ರಮದಡಿ 125 ಶಾಲೆಗಳನ್ನು 3.25 ಕೋಟಿ ರು. ವೆಚ್ಚದಲ್ಲಿ ಸುಧಾರಿಸಲಾಗಿದೆ. ಈ ಪೈಕಿ ಅರ್ಧ ಹಣವನ್ನು ಗ್ರಾಮಸ್ಥರು ಭರಿಸಿದ್ದರೆ, ಉಳಿದರ್ಧ ಹಣ ವೈಯಕ್ತಿಕವಾಗಿ ನೀಡಲಾಗಿದೆ. ಓಸ್ಯಾಟ್, ರೌಂಡ್ ಟೇಬಲ್, ರೋಟರಿ, ಡ್ರೀಮ್ ಸ್ಕೂಲ್ ಫೌಂಡೇಶನ್‌ನಂಥ ಹಲವು ಸಂಸ್ಥೆಗಳ ಸಹಭಾಗಿತ್ವದಡಿ ಶಾಲಾ ಕಟ್ಟಡ ನಿರ್ಮಾಣ, ಮಕ್ಕಳಿಗೆ ತರಬೇತಿಯಂತ ಅನುಕೂಲತೆ ಪಡೆಯಲಾಗುತ್ತಿದೆ. ಪರಿವರ್ತನ ಕಲಿಕಾ ಕೇಂದ್ರದ ಮೂಲಕ ಜಾಗತಿಕ ಸ್ಪರ್ಧೆಗೆ ತಾಲೂಕಿನ ವಿದ್ಯಾರ್ಥಿಗಳು, ಯುವ ಸಮೂಹವನ್ನು ಸಜ್ಜುಗೊಳಿಸಲು ತರಬೇತಿ ನೀಡಲಾಗುತ್ತಿದೆ ಎಂದು ಹೇಳಿದ ಅವರು, ಶಿಫಾರ್‌ಸೊಸೈಟಿಯ ಸದಸ್ಯರು ಕಂಪ್ಯೂಟರ್ ಸಾಕ್ಷರತೆ ಹೆಚ್ಚಿಸುವ ಉದ್ದೇಶದಿಂದ ಕಂಪ್ಯೂಟರ್‌ಲ್ಯಾಬ್‌ಗೆ ನೆರವು ನೀಡಿರುವುದು ಗ್ರಾಮೀಣ ಪ್ರದೇಶದ ಮಕ್ಕಳಿಗೆ ಅನುಕೂಲವಾಗಲಿದೆ ಎಂದರು.



ಶೀಗಿಹಳ್ಳಿ ಗ್ರಾಮದ ಸರಕಾರಿ ಪ್ರಾಥಮಿಕ ಶಾಲೆಯಲ್ಲಿ ಶಾಸಕ ಶ್ರೀನಿವಾಸ ಮಾನೆ ಕಂಪ್ಯೂಟರ್ ಲ್ಯಾಬ್ ಉದ್ಘಾಟಿಸಿದರು.

ಶಿ ಫಾರ್‌ಸೊಸೈಟಿಯ ಸಂಸ್ಥಾಪಕ ಅಧ್ಯಕ್ಷೆ ಹರ್ಷಿಣಿ ವೆಂಕಟೇಶ, ನಿರ್ದೇಶಕಿ ಕವಿತಾ ಪ್ರಭಾಕರ ಮಾತನಾಡಿ, ಕಳೆದ ಹಲವು ವರ್ಷಗಳಿಂದ ರಾಜ್ಯದ ಸುಮಾರು 45 ಶಾಲೆಗಳಲ್ಲಿ ಕಂಪ್ಯೂಟರ್‌ಲ್ಯಾಬ್ ಆರಂಭಕ್ಕೆ ಅಗತ್ಯ ಹಣಕಾಸಿನ ನೆರವು ಒದಗಿಸಲಾಗಿದೆ. ಸಂಸ್ಥೆ ಆರೋಗ್ಯ ಜಾಗೃತಿ ಕಾರ್ಯಕ್ರಮಗಳ ಜೊತೆಗೆ ಶೈಕ್ಷಣಿಕ ಚಟುವಟಿಕೆಗಳಲ್ಲಿಯೂ ಸಹ ಕಾರ್ಯಶೀಲವಾಗಿದೆ. ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಪ್ರತಿಯೊಂದು ಮಗುವೂ ಸಹ ಕಂಪ್ಯೂಟರ್‌ಜ್ಞಾನ ಹೊಂದುವ ಅಗತ್ಯವಿದೆ ಎಂದರು.

ಎಸ್‌ಡಿಎಂಸಿ ಅಧ್ಯಕ್ಷ ಸಿದ್ದನಗೌಡ ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಕೆಪಿಸಿಸಿ ಸದಸ್ಯ ಟಾಕನಗೌಡ ಪಾಟೀಲ, ತಾಲೂಕಾ ಶಿಕ್ಷಣ ಸುಧಾರಣಾ ಸಮಿತಿ ಸದಸ್ಯೆ ಅನಿತಾ ಶಿವೂರ, ಬಿಇಒ ಆರ್.ವಿ. ಚೆನ್ನಿಕಟ್ಟಿ, ಇಸಿಒ ವಿ.ಟಿ. ಪಾಟೀಲ, ಬಿ.ಎನ್. ಸಂಗೂರ, ಸಿಆರ್‌ಪಿ ನಾಗರಾಜ ಸಿಂಗಾಪೂರ ಇದ್ದರು.